ಸಂಪುಟ : 47 | ಸಂಚಿಕೆ : 98 | R.N.I.No.50602/77 | Reg.No.KA/SK/SMG-206/2018-20 | ಸ್ಥಾಪಕ ಪ್ರಕಾಶಕರು, ಮಾಲೀಕರು ದಿ.ಎಸ್.ಹೆಚ್. ರಂಗಸ್ವಾಮಿ | email:navika1smg@gmail.com | navikaadds@gmail.com | For Advt:9916117085 | For News:9886044141

■ ಕ್ರಿಯಾಸಿದ್ಧಿಃ ಸತ್ತ್ವೇ ಭವತಿ ■ ಸ್ಥಾಪನೆ: 1977

# ನಾವಿಕ

Phone:08182-404747/221557

epaper: www.navikakannadadaily.com

ಬಿಡಿಪ್ರತಿ : 2 ರೂ. **NAVIKA KANNADA DAILY**

25 ಅಕ್ಟೋಬರ್ 2023 ಬುಧವಾರ

■ ರಾಜಕೀಯದಲ್ಲಿ ಕುಮಾರಸ್ವಾಮಿ ವಿಲನ್ : ಸಿಎಂ ಸಿದ್ದರಾಮಯ್ಯ
■ ಜನಸಾಗರದ ನಡುವೆ ಶಿವಮೊಗ್ಗ ದಸರಾ ಸಂಪನ್ನ

4ನೇ ಪುಟ



## ಕಾಂಗ್ರೆಸ್ ಮನೆ ಸೇರಿದ ಎಂ. ಶ್ರೀಕಾಂತ್

**ನಾವಿಕ,ಬೆಂಗಳೂರು,ಶಿವಮೊಗ್ಗ,ಅ.25:-**

ಜೆಡಿಎಸ್ ಜಿಲ್ಲಾಧ್ಯಕ್ಷ, ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರ ಆಪ್ತರಾಗಿದ್ದ ಎಂ. ಶ್ರೀಕಾಂತ್ ತಮ್ಮ ನೂರಾರು ಬೆಂಬಲಿಗರೊಂದಿಗೆ ಇಂದು ಬೆಂಗಳೂರಿನಲ್ಲಿ ಕಾಂಗ್ರೆಸ್ ಪಕ್ಷ ಸೇರ್ಪಡೆಗೊಂಡರು.

ಕಳೆದ ಒಂದು ತಿಂಗಳ ಹಿಂದೆಯಷ್ಟೇ ಜೆಡಿಎಸ್ ತೊರೆಯುವ ಬಗ್ಗೆ ಘೋಷಣೆ ಮಾಡಿದ್ದ ಎಂ. ಶ್ರೀಕಾಂತ್ ಅವರು ಇಂದು ಕೆಪಿಸಿಸಿ ಕಚೇರಿಯಲ್ಲಿ ಅಧಿಕೃತವಾಗಿ ಕಾಂಗ್ರೆಸ್ ಸೇರಿದರು. ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಅವರು ಶ್ರೀಕಾಂತ್ ಮತ್ತು ಅವರ ಬೆಂಬಲಿಗ ಜೆಡಿಎಸ್ ಮುಖಂಡರುಗಳನ್ನು ಪಕ್ಷಕ್ಕೆ ಬರಮಾಡಿಕೊಂಡರು.

ಶಿವಮೊಗ್ಗ ಮಹಾನಗರಪಾಲಿಕೆ ಸದಸ್ಯ ನಾಗರಾಜ ಕಂಕಾರಿ, ಮಾಜಿ ಉಪಮೇಯರ್ ಪಾಲಾಕ್ಷಿ, ಯುವ ಜೆಡಿಎಸ್ ಪದಾಧಿಕಾರಿಗಳಾದ ಸೂಲಯ್ಯ ಸೇರಿದಂತೆ ಅನೇಕ ಮುಖಂಡರು, ಜೆಡಿಎಸ್ ವಿವಿಧ ಘಟಕಗಳ ಪದಾಧಿಕಾರಿಗಳು ಕಾಂಗ್ರೆಸ್ ಸೇರಿದರು.

■ ಹುಲಿ ಉಗುರು ಧರಿಸಿದ ಪ್ರಕರಣ

# ನಟ ದರ್ಶನ್- ವಿನಯ್ ಗುರೂಜಿ ವಿರುದ್ಧ ತನಿಖೆ

**ನಾವಿಕ,ಬೆಂಗಳೂರು,ಅ.25:-**

ಹುಲಿ ಉಗುರು ಧರಿಸಿದ ಆರೋಪದ ಮೇಲೆ ಬಿಗ್ ಬಾಸ್ ಸೀಸನ್ 10ರ ಸ್ಪರ್ಧಿಯಾಗಿದ್ದ ವರ್ತೂರು ಸಂತೋಷ್ ಅವರನ್ನು ಬಂಧಿಸಿದ ನಂತರ ಚಾಲೆಂಜಿಂಗ್ ಸ್ಟಾರ್ ದರ್ಶನ್ ಅವರು ಅಂತಹದ್ದೇ ಪೆಂಡೆಂಟ್ ಧರಿಸಿರುವ ಫೋಟೋಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದ್ದು, ಅವರ ವಿರುದ್ಧವೂ ಕ್ರಮ ತೆಗೆದುಕೊಳ್ಳುವಂತೆ ಹಲವರು ಒತ್ತಾಯಿಸಿದ್ದಾರೆ. ಮತ್ತು ಈ ಸಂಬಂಧ ನಟ ದರ್ಶನ್ ಹಾಗೂ ವಿನಯ್ ಗುರೂಜಿ ವಿರುದ್ಧ ದೂರು ಸಹ ದಾಖಲಾಗಿದೆ.





ನಟ ದರ್ಶನ್ ಹಾಗೂ ವಿನಯ್ ಗುರೂಜಿ ವಿರುದ್ಧ ತನಿಖೆಗೆ ಅರಣ್ಯ ಇಲಾಖೆ ಅಧಿಕಾರಿಗಳು ಮುಂದಾಗಿದ್ದು, ತನಿಖೆಗಾಗಿ ಸಂಬಂಧಪಟ್ಟ ಅಧಿಕಾರಿಗಳನ್ನು ಈಗಾಗಲೇ ನಿಯೋಜಿಸಲಾಗಿದೆ ಎಂದು ತಿಳಿಸಿದ್ದಾರೆ.

ಚಿಕ್ಕಮಗಳೂರಿನ ಗೌರಿಗದ್ದೆ ಆಶ್ರಮದ ಧರ್ಮಗುರು ವಿನಯ್ ಗುರೂಜಿ ವಿರುದ್ಧ ಹುಲಿ ಚರ್ಮದ ಮೇಲೆ ಕುಳಿತ ಆರೋಪ ಕೇಳಿಬಂದಿದ್ದು, ಕ್ರಮ ಕೈಗೊಳ್ಳುವಂತೆ ನೆಟ್ಟಿಗರು ಒತ್ತಾಯಿಸಿದ್ದಾರೆ.

ಈ ಕುರಿತು ಅರಣ್ಯ ಇಲಾಖೆ ಹಿರಿಯ ಅಧಿಕಾರಿಯೊಬ್ಬರು ಮಾತನಾಡಿದ್ದು, ''ಇಬ್ಬರ ವಿರುದ್ಧ ನಮಗೆ ಯಾವುದೇ ದೂರು ಬಂದಿಲ್ಲವಾದರೂ, ಅವರು ವನ್ಯಜೀವಿ ದೇಹದ ಭಾಗಗಳನ್ನು ಹೊಂದಿದ್ದಾರೆ ಎಂಬ ಮಾಹಿತಿ ಇದೆ. ಸಂಬಂಧಪಟ್ಟ ಅರಣ್ಯ ಅಧಿಕಾರಿಗಳು ತಮ್ಮಲ್ಲಿರುವ ಮಾಹಿತಿಯ ಆಧಾರದ ಮೇಲೆ ತನಿಖೆ ನಡೆಸಲಿದ್ದಾರೆ ಎಂದು ತಿಳಿಸಿದ್ದಾರೆ.

ಮುಖ್ಯ ವನ್ಯಜೀವಿ ವಾರ್ಡನ್‌ನಿಂದ ಪೂರ್ವಾನುಮತಿ ಪಡೆಯದೆ ಹುಲಿ ಚರ್ಮ ಅಥವಾ ಉಗುರು ಹೊಂದಿರುವುದು ಕಂಡುಬಂದರೆ, ಕಾನೂನು ಪ್ರಕಾರ ಅವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಹೇಳಿದ್ದಾರೆ.

### ಖಚಿತತೆ ಮುಖ್ಯ

ಪ್ಲಾಸ್ಟಿಕ್‌ನಿಂದ ತಯಾರಿಸಿದ ವಸ್ತುಗಳು ಮಾರುಕಟ್ಟೆಯಲ್ಲಿ ಲಭ್ಯವಿರುವುದರಿಂದ ನಟ 'ಹುಲಿ ಉಗುರಿನ' ಪೆಂಡೆಂಟ್ ಧರಿಸಿದ್ದಾರೋ ಇಲ್ಲವೋ ಎಂಬುದನ್ನು ಅಧಿಕಾರಿಗಳು ಖಚಿತವಾಗಿ ಹೇಳಲು ಸಾಧ್ಯವಿಲ್ಲ.

# ರಾಜಕೀಯದಲ್ಲಿ ಕುಮಾರಸ್ವಾಮಿ ವಿಲನ್ : ಸಿಎಂ

**ನಾವಿಕ,ಮೈಸೂರು,ಅ.25:-**

ರಾಜಕೀಯದಲ್ಲಿ ವಿಲನ್ ಇದ್ದರೆ ಅದು ಮಿಸ್ಟರ್ ಕುಮಾರಸ್ವಾಮಿ. ಸಮ್ಮಿಶ್ರ ಸರ್ಕಾರ ಬೀಳುವಾಗ ಅಮೆರಿಕದಲ್ಲಿ ಕೂತಿದ್ದರು ಇದಕ್ಕೆ ಏನೆಂದು ಕರೆಯಬೇಕು. ಇಡೀ ಒಂದು ವರ್ಷ ಎರಡು ತಿಂಗಳು ತಾಜ್ ವೆಸ್ಟ್ ಎಂಡ್‌ನಲ್ಲಿ ಕಾಲ ಕಳೆದರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಾಗ್ದಾಳಿ ನಡೆಸಿದರು.

ಮೈಸೂರಿನಲ್ಲಿ ಮಾತನಾಡಿದ ಅವರು, 'ಕಾಂಗ್ರೆಸ್-ಜೆಡಿಎಸ್ ಸಮ್ಮಿಶ್ರ ಸರ್ಕಾರ ಬೀಳುವಾಗ ಅಮೆರಿಕದಲ್ಲಿ ಕೂತಿದ್ದರು. ಇದಕ್ಕೆ ಏನನ್ನಬೇಕು' ಒಂದು ವರ್ಷ ಎರಡು ತಿಂಗಳು ತಾಜ್ ವೆಸ್ಟ್ ಎಂಡ್ ಹೋಟೆಲ್‌ನಲ್ಲೇ ಕಾಲ ಕಳೆದರು, ವಿಧಾನಸಭೆಯಲ್ಲಿ ಬಿಜೆಪಿ ಅವರೇ ಸರಕಾರ ಬೀಳಿಸಿದರು ಎಂದು ಹೇಳಿದರು. ಇದು ರೆಕಾರ್ಡ್ ಆಗಿದೆ. ಅಸೆಂಬ್ಲಿ ರೆಕಾರ್ಡ್ ಬೇಕಾದರೆ ಬಿಡುಗಡೆ ಮಾಡುತ್ತೇನೆ ಎಂದಿದ್ದಾರೆ.

ಬಿಜೆಪಿಯವರು ಹತಾಶರಾಗಿದ್ದಾರೆ. ಆ ಪಕ್ಷದವರಿಗಿಂತಲೂ ಕುಮಾರಸ್ವಾಮಿ ಜಾಸ್ತಿ ಹತಾಶರಾಗಿದ್ದಾರೆ ಎಂದು ವ್ಯಂಗ್ಯವಾಡಿದರು. ಬಿಜೆಪಿ -ಜೆಡಿಎಸ್‌ನದ್ದು ಕುರುಡರ ಕಥೆಯಾಗಿದೆ. ಇವರು ಅವರ ಮೇಲೆ, ಅವರು ಇವರ ಮೇಲೆ ಅವಲಂಭಿತರಾಗಿದ್ದಾರೆ. ಖಾಲಿ ಡಬ್ಬ ಮಾತ್ರ ಶಬ್ದ ಜಾಸ್ತಿ ಮಾಡುತ್ತದೆ. ತುಂಬಿದ ಕೊಡ ಎಂದಿಗೂ ತುಳುಕುವುದಿಲ್ಲ ಎಂದು ಬಿಜೆಪಿ-ಜೆಡಿಎಸ್ ನಾಯಕರ ವಿರುದ್ಧ ಹರಿಹಾಯ್ದರು.

ಕನಕಪುರ ವಿಚಾರದಲ್ಲಿ ಮಾತನಾಡಿದ ಅವರು, ಆ ವಿಷಯವನ್ನು ಡಿ.ಕೆ. ಶಿವಕುಮಾರ್ ಅವರನ್ನೇ ಕೇಳಿ. ನನಗೆ ಅದು ಗೊತ್ತಿಲ್ಲ. ನನ್ನ ಜೊತೆ ಅವರು ಚರ್ಚೆ ಮಾಡಿಲ್ಲ. ನನಗೆ ಅವರ ಮೈಂಡ್‌ನಲ್ಲಿ ಏನೂ ಇದೆ ಎಂಬುದು ಗೊತ್ತಿಲ್ಲ. ಗೊತ್ತಿಲ್ಲದ ವಿಚಾರದ ಬಗ್ಗೆ ಹೆಚ್ಚಾಗಿ ಮಾತಾಡುವುದಿಲ್ಲ ಎಂದರು.

ಈ ನಡುವೆ ಎಟಿಎಂ ಸರಕಾರ ಎಂಬ ಬಿಜೆಪಿ ಟ್ವೀಟ್‌ಗೆ ತಿರುಗೇಟು ನೀಡಿದ ಅವರು, ಬಿಜೆಪಿಗೆ ಮಾನ ಮರ್ಯಾದೆ ಇದ್ಯಾ ? ಕೋಟ್ಯಂತರ ರೂಪಾಯಿ ಹಣದಲ್ಲಿ ಆಪರೇಷನ್ ಕಮಲ ಮಾಡಿದವರು ನಮ್ಮ ಬಗ್ಗೆ ಮಾತಾಡುತ್ತಾರೆ ? ರಾಜ್ಯ ಆರ್ಥಿಕವಾಗಿ ದಿವಾಳಿ ಆಗಲು ಬಿಜೆಪಿ ಕಾರಣ. ವಿದ್ಯುತ್ ತೊಂದರೆ ಆಗಿದ್ದರೆ ಅದಕ್ಕೆ ಬಿಜೆಪಿ ಕಾರಣ. ಬಿಜೆಪಿ ಆಡಳಿತ ಅವಧಿಯಲ್ಲಿ ಒಂದು ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆ ಮಾಡಿಲ್ಲ. ಬಿಜೆಪಿಗೆ ಕಾಂಗ್ರೆಸ್ ಬಗ್ಗೆ ಮಾತಾಡಲು ನೈತಿಕತೆ ಇಲ್ಲ ಎಂದರು.

### ರಾಜ್ಯ ದಿವಾಳಿಯಾಗಿದ್ದು ಬಿಜೆಪಿಯಿಂದ

ಬಿಜೆಪಿಯವರು ಸಾಲ ಮಾಡಿ ಆರ್ಥಿಕವಾಗಿ ರಾಜ್ಯ ದಿವಾಳಿ ಮಾಡಿ ಹೋಗಿದ್ದಾರೆ. ಹಣ ಇರದಿದ್ದರೂ ಕಾಮಗಾರಿ ಟೆಂಡರ್ ಕರೆದು 30 ಸಾವಿರ ಕೋಟಿ ರೂ. ಪೆಂಡಿಂಗ್ ಬಿಲ್ ಇದೆ. ಇದಕ್ಕೆ ಯಾರು ಹೊಣೆ ? ನಮ್ಮ ಐದು ವರ್ಷದ ಆಡಳಿತ ಅರ್ಥಿಕ ಪರಿಸ್ಥಿತಿ, ಬಿಜೆಪಿ ಅವಧಿಯ ಆರ್ಥಿಕ ಪರಿಸ್ಥಿತಿ ಬಗ್ಗೆ ಶ್ವೇತ ಪತ್ರ ಹೊರಡಿಸುತ್ತೇನೆ. ಹೈಕಮಾಂಡ್‌ಗೆ ದುಡ್ಡು ಕಳಿಸುತ್ತೇವೆ ಎಂಬುದು ಸುಳ್ಳು. ನಾವು ಯಾರಿಗೂ ಒಂದು ಪೈಸೆ ಕೊಟ್ಟಿಲ್ಲ.



## ಹುಲಿ ಉಗುರಿಗಿರುವ ಬೆಲೆ ಗೋವಿಗೆ ಇರದಿರುವುದು ದುರ್ದೈವ

### ಹಿಂದೂ ಮುಖಂಡ ದೀನದಯಾಳು ವಿಷಾಧ

**ನಾವಿಕ,ಶಿವಮೊಗ್ಗ,ಅ.25:-**

ಹುಲಿಯ ಉಗುರು ಕಿತ್ತರೆ ಅದು ಮಹಾನ್ ಅಪರಾಧ. ಜೊತೆಗೆ 14 ವರ್ಷ ಜೈಲು ಶಿಕ್ಷೆ. ಆದರೆ ಅದೇ ಶುದ್ಧವಾದ ಅಮೃತದಂತ ಹಾಲು ಕೊಡುವ ಗೋವಿನ ಕತ್ತನ್ನು ಕಡಿದರೆ ಯಾವುದೇ ಅಪರಾಧವಲ್ಲ. ಇದು ಕಾನೂನಿನ ಅಣಕ ಎಂದು ಹಿಂದೂ ಮುಖಂಡ ದೀನದಯಾಳು ಹೇಳಿದ್ದಾರೆ.



ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ರೈತರ ಬೆನ್ನೆಲುಬು ಗೋವು, ದೇವರ ಅಭಿಷೇಕಕ್ಕೂ ಪವಿತ್ರವಾದ ಹಸುವಿನ ಹಾಲು ಬೇಕು. ಯಾವುದೇ ಧರ್ಮ, ಯಾವುದೇ ಜಾತಿ ಎನ್ನದೆ ಸಣ್ಣ ಮಕ್ಕಳಿಂದ ಹಿಡಿದು ವಯೋವೃದ್ಧ ಮನುಷ್ಯನಿಗೂ ಹಸುವಿನ ಹಾಲು ಬೇಕು. ಅದರ ಗಂಜಲ, ಸಗಣಿ ಎಲ್ಲವೂ ಪರಮ ಪವಿತ್ರ ಶ್ರೇಷ್ಠ. ಅದಕ್ಕಾಗಿಯೇ ಗೋವನ್ನು ಭಕ್ತಿಯಿಂದ ಗೋಮಾತೆ ಎಂದು ಪೂಜಿಸುತ್ತಾರೆ.

ಆದರೆ ಹುಲಿಯ ಉಗುರಿಗೆ ಇಷ್ಟೊಂದು ಬೆಲೆ ಇದೆಯೇ ? ಇಷ್ಟೊಂದು ಕಟ್ಟರ್ ಕಾನೂನು ಇದೆಯೇ ? ಆದರೆ ನಮ್ಮೆಲ್ಲರನ್ನೂ ಪೋಷಿಸುವ ಪವಿತ್ರವಾದ ಗೋಮಾತೆಯನ್ನು ಪ್ರತಿ ನಿತ್ಯ ಸಾವಿರಾರು ಕಸಾಯೀ ಖಾನೆಗಳಲ್ಲಿ ಲಕ್ಷಾಂತರ ಗೋವುಗಳನ್ನು ಚಿತ್ರ ವಿಚಿತ್ರವಾಗಿ ಹಿಂಸಿಸಿ ಕ್ರೂರವಾಗಿ ಕೊಲ್ಲುವವರಿಗೆ ಯಾವುದೇ ಕಠಿಣವಾದ ಕಾನೂನು ಶಿಕ್ಷೆ ಇಲ್ಲವೇ ಎಂದು ಪ್ರಶ್ನಿಸಿದ್ದಾರೆ.

ಈ ಎಲ್ಲಾ ಕಸಾಯಿಖಾನೆಗಳನ್ನು ಮುಚ್ಚಿಸಬೇಕು. ಗೋಹತ್ಯೆ ನಿಷೇಧ ಕಾಯ್ದೆಯಡಿಯಲ್ಲಿ ಗೋಹತ್ಯೆ ಮಾಡುತ್ತಿರುವವರನ್ನು ಕೂಡಲೇ ಬಂಧಿಸಿ ಜೈಲಿಗೆ ಕಳುಹಿಸಬೇಕು ಎಂದು ಸರ್ಕಾರಕ್ಕೆ ಅವರು ಆಗ್ರಹಿಸಿದ್ದಾರೆ.

## ಹಿರಿಯ ಪತ್ರಕರ್ತ ಶ್ರೀರಾಮ್ ನಿಧನ



**ನಾವಿಕ,ಶಿವಮೊಗ್ಗ,ಅ.25:-**

ಭದ್ರಾವತಿಯ ಹಿರಿಯ ಪತ್ರಕರ್ತ ಎನ್. ಶ್ರೀರಾಮ್(79) ಅನಾರೋಗ್ಯದಿಂದ ನಿನ್ನೆ ನಿಧನರಾದರು.

ಪ್ರಜಾವಾಣಿ, ಡೆಕ್ಕನ್ ಹೆರಾಲ್ಡ್ ಪತ್ರಿಕೆಗಳ ಏಜೆಂಟ್ ಆಗಿ ಹಾಗೂ ವಿವಿಧ ಪತ್ರಿಕೆಗಳಿಗೆ ಸುದ್ದಿ ಕಳಿಸುವ ಮೂಲಕ ಐದು ದಶಕಗಳ ಕಾಲ ಪತ್ರಕರ್ತರಾಗಿ ಸೇವೆ ಸಲ್ಲಿಸಿದ್ದ ಅವರು, ಭದ್ರಾವತಿಯ ಪತ್ರಿಕಾ ಕ್ಷೇತ್ರದಲ್ಲಿ ಹೆಸರು ಮಾಡಿದ್ದವರು.

ಇವರ ನಿಧನಕ್ಕೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಕೆ.ವಿ. ಶಿವಕುಮಾರ್ ಹಾಗೂ ಪದಾಧಿಕಾರಿಗಳು ಸದಸ್ಯರು ತೀವ್ರ ಸಂತಾಪ ಸೂಚಿಸಿದ್ದಾರೆ.

### ಶೀಘ್ರದಲ್ಲಿಯೇ ರಾಜ್ಯ ಬಿಜೆಪಿಗೆ ನೂತನ ಸಾರಥಿ

## ಶೋಭಾ ಕರಂದ್ಲಾಜೆ ಅಧ್ಯಕ್ಷರಾದರೆ ಬಿಎಸ್‌ವೈಗೂ 'ಸಂತೋಷ'

**ನಾವಿಕ,ಬೆಂಗಳೂರು,ಅ.25:-**

ವಿಧಾನಸಭೆ ಚುನಾವಣೆ ಮುಗಿದು ಐದು ತಿಂಗಳು ಕಳೆದರು ಪಕ್ಷಕ್ಕೆ ರಾಜ್ಯಾಧ್ಯಕ್ಷರು ಹಾಗೂ ವಿಧಾನಸಭೆ ವಿರೋಧ ಪಕ್ಷದ ನಾಯಕನನ್ನು ನೇಮಕ ಮಾಡಲು ಬಿಜೆಪಿ ತಿಣುಕಾಟ ನಡೆಸುತ್ತಿದೆ.

ಲೋಕಸಭೆ ಚುನಾವಣೆ ಸಮೀಸುತ್ತಿರುವ ಹಿನ್ನೆಲೆಯಲ್ಲಿ ರಾಜ್ಯಾಧ್ಯಕ್ಷ ನೇಮಕಕ್ಕೆ ಬಿಜೆಪಿ ಹೈಕಮಾಂಡ್ ಮುಂದಾಗಿದೆ ಎನ್ನಲಾಗಿದ್ದು ಇನ್ನೇನು ಕೆಲ ದಿನಗಳಲ್ಲೇ ಕರ್ನಾಟಕ ಬಿಜೆಪಿ ರಾಜ್ಯಾಧ್ಯಕ್ಷರ ಹೆಸರನ್ನು ಹೈಕಮಾಂಡ್ ಅಧಿಕೃತವಾಗಿ ಘೋಷಣೆ ಮಾಡಲಿದೆ. ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಅವರ ಹೆಸರು ಕೇಳಿ ಬರುತ್ತಿದ್ದು, ಶೋಭಾ ಕರಂದ್ಲಾಜೆ ಅವರ ಕಾರ್ಯವೈಖರಿಯನ್ನು ಬಿಜೆಪಿ ಹೈಕಮಾಂಡ್ ಸಮೀಪದಿಂದ ನೋಡಿದೆ. ಇನ್ನು ಈಗಾಗಲೇ ಹಲವು ಜವಾಬ್ದಾರಿಯನ್ನು ಯಶಸ್ವಿಯಾಗಿ ನಿಭಾಯಿಸಿರುವ ಶೋಭಾ, ಕೊಟ್ಟ ಟಾಸ್ಕ್ ಪೂರೈಸುತ್ತಾ ಬಂದಿದ್ದಾರೆ.





ಶೋಭಾ ಕರಂದ್ಲಾಜೆ ಅವರು ಈ ಹಿಂದೆಯೇ ತಮಗೆ ಆಸಕ್ತಿಯಿಲ್ಲ ಎಂದು ಹೇಳಿದ್ದರೂ, ಹೊಸ ಅಧ್ಯಕ್ಷರು ಅಧಿಕಾರ ವಹಿಸಿಕೊಂಡರೆ ಕೆಲವು ಹೊಸ ಕ್ರಮಗಳಿಂದ ಪಕ್ಷಕ್ಕೆ ಒಳ್ಳೆಯದಾಗುತ್ತದೆ ಎಂದು ಬಿಜೆಪಿಯೊಳಗೆ ಒಂದು ವರ್ಗದ ಮುಖಂಡರು ಭಾವಿಸಿದ್ದಾರೆ.

ಒಕ್ಕಲಿಗರಾದ ಕರಂದ್ಲಾಜೆ ಅವರು ಪಕ್ಷದ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಬಿ.ಎಲ್. ಸಂತೋಷ್ ಮತ್ತು ರಾಜ್ಯ ಹಿರಿಯ ನಾಯಕ ಬಿ.ಎಸ್.ಯಡಿಯೂರಪ್ಪ ಇಬ್ಬರಿಗೂ ಹತ್ತಿರದವರಾಗಿದ್ದಾರೆ. ಒಂದು ವೇಳೆ ಪಕ್ಷದ ರಾಜ್ಯಾಧ್ಯಕ್ಷರಾಗಿ ಶೋಭಾ ನೇಮಕಗೊಂಡರೆ, ಎಲ್ಲಾ ಬಣಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು ಪಕ್ಷದ ಕಾರ್ಯಕರ್ತರನ್ನು ಪ್ರಬಲ ಪ್ರಚಾರಕ್ಕೆ ಪ್ರೇರೇಪಿಸುವ ಮೂಲಕ ರಾಜ್ಯದ 28 ಲೋಕಸಭಾ ಸ್ಥಾನಗಳಲ್ಲಿ 25 ಸ್ಥಾನಗಳನ್ನು ಗೆಲ್ಲುವುದು ಅವರ ದೊಡ್ಡ ಸವಾಲಾಗಿದೆ.

### ವಿಜಯೇಂದ್ರಗೆ ಪಟ್ಟ ?

ಒಂದು ವೇಳೆ ವಿಜಯೇಂದ್ರ ಅವರಿಗೆ ರಾಜ್ಯಾಧ್ಯಕ್ಷ ಹುದ್ದೆ ನೀಡಿದರೇ ಅವರ ತಂದೆ ಯಡಿಯೂರಪ್ಪ ಮತ್ತಷ್ಟು ಆಕ್ಟೀವ್ ಆಗಲಿದ್ದಾರೆ ಅವರ ಮಾರ್ಗದರ್ಶನದಂತೆ ಪಕ್ಷಕ್ಕೆ ಮತ್ತಷ್ಟು ಲಾಭವಾಗುವ ಸಾಧ್ಯತೆಯಿದೆ ಎಂದು ಪಕ್ಷದೊಳಗಿನ ಕೆಲವರು ಅಭಿಪ್ರಾಯಪಟ್ಟಿದ್ದಾರೆ.

ಆದರೆ ಇಂತಹ ಸಮಯದಲ್ಲಿ ರಾಜ್ಯಾಧ್ಯಕ್ಷ ಹುದ್ದೆ ವಹಿಸಿಕೊಳ್ಳುವುದು ಹೊರೆಯಾಗಲಿದೆ ಎಂದು ರಾಜಕೀಯ ವಿಶ್ಲೇಷಕರು ಅಭಿಪ್ರಾಯಪಟ್ಟಿದ್ದಾರೆ, ಏಕೆಂದರೆ ಇರುವ ಕಡಿಮೆ ಅವಧಿಯಲ್ಲಿ ಸಾಕಷ್ಟು ಕೆಲಸ ಮಾಡಬೇಕಾಗುತ್ತದೆ. ಒಂದು ವೇಳೆ ಸಂಸತ್ತಿನ ಚುನಾವಣೆಯ ಫಲಿತಾಂಶ ಅನುಕೂಲಕರವಾಗಿಲ್ಲದಿದ್ದರೆ ರಾಜ್ಯಾಧ್ಯಕ್ಷರ ರಾಜಕೀಯ ವೃತ್ತಿಜೀವನದ ಮೇಲೆ ಆರೋಪ ಹೊರಿಸುವ ಸಾಧ್ಯತೆಯಿದೆ ಎಂದು ಹೇಳಲಾಗುತ್ತಿದೆ.

ಪಕ್ಷದ ವರಿಷ್ಠರು ಐದು ರಾಜ್ಯಗಳ ಚುನಾವಣೆಗಳಲ್ಲಿ ನಿರತರಾಗಿದ್ದರು ಮತ್ತು ಡಿಸೆಂಬರ್ 3 ರಂದು ಫಲಿತಾಂಶಗಳು ಪ್ರಕಟವಾಗುವವರೆಗೆ ಅವರು ಈ ನಿರ್ಧಾರ ತೆಗೆದುಕೊಳ್ಳಲು ಸಾಧ್ಯವಿಲ್ಲ ಎಂದು ಪಕ್ಷದ ಮೂಲಗಳು ಸೂಚಿಸಿವೆ.

ಲಿಂಗಾಯತ ಸಮುದಾಯದಿಂದ ವಿಜಯೇಂದ್ರ ಹೆಸರು ಕೇಳಿ ಬಂದಿದ್ದು, ಯುವಕರಿಗೆ ಹೈಕಮಾಂಡ್ ಮಣೆ ಹಾಕಲಿದೆ ಎಂದು ವಿಜಯೇಂದ್ರ ಆಪ್ತ ಬಳಗ ಸಾಕಷ್ಟು ನಿರೀಕ್ಷೆ ಇಟ್ಟುಕೊಂಡಿದೆ. ಆದರೆ ವಿಜಯೇಂದ್ರ ಅವರಿಗಿಂತ ಹಿರಿಯರಾಗಿರುವ ಶೇ.80ರಷ್ಟು ಶಾಸಕರು ಅವರ ಕೈಕೆಳಗೆ ಹೇಗೆ ಕೆಲಸ ಮಾಡುತ್ತಾರೆ ಎಂದು ಪಕ್ಷದ ಕೆಲವು ಮುಖಂಡರು ಅಚ್ಚರಿ ವ್ಯಕ್ತ ಪಡಿಸಿದ್ದಾರೆ.

# ಅ.28 ರಂದು ಶಿವಮೊಗ್ಗದಲ್ಲಿ 'ಗುಳಿಗ'ನ ಅಬ್ಬರ

■ ಕುವೆಂಪು ರಂಗಮಂದಿರದಲ್ಲಿ ಸಂಜೆ 6.30ಕ್ಕೆ 'ಶಿವಧೂತ ಗುಳಿಗ' ನಾಟಕ ಪ್ರದರ್ಶನ

**ನಾವಿಕ,ಶಿವಮೊಗ್ಗ,ಅ.25:-**

ರಂಗಭೂಮಿಯಲ್ಲಿ ದಾಖಲೆ ಸೃಷ್ಟಿಸಿದ ದೇಶ ವಿದೇಶಗಳಲ್ಲಿ ಮೆಚ್ಚುಗೆ ಪಡೆದ ಕನ್ನಡ ನಾಟಕ 'ಶಿವಧೂತ ಗುಳಿಗ' ಪ್ರದರ್ಶನ ಅ.28ರಂದು ಸಂಜೆ 6-30ಕ್ಕೆ ಕುವೆಂಪು ರಂಗಮಂದಿರದಲ್ಲಿ ಆಯೋಜಿಸಲಾಗಿದೆ ಎಂದು ಸಂಚಾಲಕ ಜಾದುಗಾರ್ ವಿಕ್ರಮ್ ಶೆಟ್ಟಿ ಹೇಳಿದರು.



ಅವರು ಇಂದು ಮೀಡಿಯಾ ಹೌಸ್‌ನಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಈ ನಾಟಕವೊಂದು ಅದ್ಭುತ ಹಾಗೂ ವಿಸ್ಮಯವಾಗಿದೆ. ಒಂದು ರೀತಿಯಲ್ಲಿ ಸಿನಿಮಾ ನೋಡಿದ ಹಾಗಾಗುತ್ತದೆ. ದೈವವನ್ನೇ ಮುಖ್ಯವಾಗಿಟ್ಟುಕೊಂಡು ವಿಭಿನ್ನ ಶೈಲಿಯಲ್ಲಿ ಈ ನಾಟಕ ಮೂಡಲಿದೆ. ಈ ಶಿವಧೂತ ಗುಳಿಗ ಅಕ್ಟೋಬರ್ 28ರ ರಾತ್ರಿ ಕಾಣಿಸುತ್ತಾನೆ ಎಂದರು.

ಈಗಾಗಲೇ ಭಾರತದ ಅನೇಕ ಜಾಗದಲ್ಲಿ ಕಾಣಿಸಿಕೊಂಡಿರುವ ಈ ಗುಳಿಗ ನಂಬಿದ ಭಕ್ತರ ಉದ್ಧಾರಕ್ಕಾಗಿ ಶಿವಮೊಗ್ಗದ ಕುವೆಂಪು ನೆಲದಲ್ಲಿ ಆಶೀರ್ವಾದ ನೀಡಲು ತಯಾರಾಗಿ ನಿಂತಿದ್ದಾನೆ. ದೈವ ಮತ್ತು ದೇವರನ್ನು ಒಂದೇ ಎಂದು ನಂಬಿದ ನಮಗೆ ಕಣ್ಣಿಗೆ ಕಾಣಿಸಿಕೊಳ್ಳುವ ದೇವರೇ ನಮ್ಮ ಹತ್ತಿರದ ದೈವವಾಗಿದೆ. ಈ ಎಲ್ಲಾ ದೈವಗಳು ನಮ್ಮ ನಮ್ಮ ಮನೆತನಗಳ ಪೂರ್ವಿಕರೇ ಆಗಿದ್ದು ನಮ್ಮ ಕಷ್ಟ ಪರಂಪರೆಯನ್ನು ತೊಲಗಿಸಲು ಆಗಾಗ ಆಗಮಿಸುತ್ತ ಇರುತ್ತದೆ. ಇಂಥ ಮಹಾನ್ ದೈವಗಳಲ್ಲಿ ಒಂದಾದ ಜಗತ್ತಿನ ಲಯಕರ್ತನಾದ ಶಿವನ ರುಂಡಮಾಲೆಯಲ್ಲಿ ಅಡಗಿದ್ದ ದುಷ್ಟರ ನಾಶ ಮಾಡುವ ಶಿಷ್ಟರ ರಕ್ಷಿಸುವ ಉದ್ದೇಶದಿಂದ ಆಗಾಗ ಭೂಮಿಯಲ್ಲಿ ಅವತರಿಸುತ್ತಾನೆ ಎಂದರು.

ಇದು ನಾಟಕವೇ ಆಗಿದ್ದರೂ ವಿಶಾಲ ಅರ್ಥದಲ್ಲಿ ನಮ್ಮ ಕೆಡುಕುಗಳನ್ನು ನಾಶಮಾಡಿ ನಮ್ಮ ಅಂತಃಶಕ್ತಿ ಬಡಿದೆಬ್ಬಿಸಿ ಒಳಿತನ್ನು ಉಂಟು ಮಾಡುವ ಶಕ್ತಿ ಈ ನಾಟಕಕ್ಕಿದೆ. ನಾಗಮಂಡಲಕ್ಕೆ ಬಲಿ ಭೂತಕೋಲದ ಉದ್ದೇಶ ಹೇಗಿದೆಯೋ ಅದೇ ಉದ್ದೇಶ ಈ ನಾಟಕಕ್ಕೂ ಇದೆ ಎಂದರು.

ಪೌರಾಣಿಕ ಅದ್ದೂರಿ ದೃಶ್ಯ ಸಂಯೋಜನೆ ಹೊಂದಿರುವಂತಹ ಆಚಾರ, ವಿಚಾರ, ಸಂಸ್ಕೃತಿಗೆ ಸಂಬಂಧಿಸಿದ, ಜನರು ಆರಾಧಿಸುವ ದೈವಗಳ ಕಥಾನಕವನ್ನು ನಾಟಕವನ್ನಾಗಿ ರೂಪಿಸಲಾಗಿದೆ ಎಂದರು.

ರಂಗಪ್ರೇಮಿ ಕೆ.ಜಿ. ವೆಂಕಟೇಶ್ ಮಾತನಾಡಿ, ಪ್ರಮುಖ ನಿರ್ದೇಶಕರಲ್ಲೊಬ್ಬರಾಗಿರುವ ವಿಜಯಕುಮಾರ್ ಕೊಡಿಯಾಲ್‌ಬೈಲ್ ಅವರು ''ಶಿವದೂತ ಗುಳಿಗ' ನಾಟಕದ ನಿರ್ದೇಶನ ಮಾಡಿದ್ದಾರೆ. ವಿಜಯ್ ಸಂಗೀತ ನೀಡಿದ್ದಾರೆ. ಇದು ಗೌರವ ಪ್ರವೇಶವಾಗಿದ್ದು, ಟಿಕೆಟ್ ಬೆಲೆ 500 ಮತ್ತು 1000ರೂ. ಇರುತ್ತದೆ. ಟಿಕೆಟ್ ಮತ್ತು ವಿವರಗಳಿಗೆ ಮೊ: 9448108222 ಮತ್ತು 8073579575ರಲ್ಲಿ ಸಂಪರ್ಕಿಸಬಹುದಾಗಿದೆ ಎಂದರು.

ಕಲಾ ಸಂಗಮ ತಂಡದ ಕಲಾವಿದರು ನಾಟಕದ ದೃಶ್ಯಾವಳಿಗಳಿಗೆ ಜೀವ ತುಂಬಿದ್ದಾರೆ. ಪರಮಾನಂದ ವಿ. ಸಾಲ್ಯಾನ್ ಅವರ ಸಂಭಾಷಣೆ ಗುರುದೇವ ಆರ್ಟ್ಸ್ ಬಂಟ್ವಾಳ, ಶರತ್ ಪೂಜಾರಿ ಮಾಲೆಮಾರ್ ವಸ್ತ್ರವಿನ್ಯಾಸ, ಹರೀಶ್ ಆಚಾರ್ಯ, ಚಂದ್ರಶೇಖರ ಶಿರ್ವ ಮಟ್ಟಾರ್ ರಂಗವಿನ್ಯಾಸ ಮಾಡಿದ್ದಾರೆ.

ಯಕ್ಷ ಧ್ರುವ ಪಟ್ಲ ಸತೀಶ್ ಶೆಟ್ಟಿ, ತೆಲಿಕದ ಬೊಳ್ಳಿ ದೇವದಾಸ್ ಕಾಪಿಕಾಡ್, ಡಾ। ವೈಷ್ಣವಿ, ರವೀಂದ್ರ ಪ್ರಭು, ನರಸಿಂಹ ಕಿಣಿ, ವಿಶಾಲ್ ರಾಜ್ ಕೋಕಿಲ ಇವರ ಹಿನ್ನೆಲೆ ಸಂಗೀತವಿದ್ದು ವಿಜಯ್ ಸಂಗೀತ ನಿರ್ದೇಶನ ಮಾಡಿದ್ದಾರೆ.

### ■ ಗುರುವ ಇದ್ದಾರೆ

ಗುಳಿಗನ ಪಾತ್ರವನ್ನು ಕಾಂತಾರದ ಗುರುವ ಪಾತ್ರಧಾರಿ ಸ್ವರಾಜ್ ಶೆಟ್ಟಿ ಮಾಡಿದ್ದಾರೆ. ನಿತೇಶ್ ಕಿನ್ನಿಗೋಳಿ, ವಿನೋದ್ ರಾಜ್ ಕೋಕಿಲ, ರಮೇಶ್ ಕಲ್ಲಡ್ಕ, ಕೀತ್ ಪುರ್ತಾಡೋ, ಧನು ಕುಲಾಲ್ ಬೊಳಂತೂರು, ಜಯರಾಮ ಆಚಾರ್ಯ ಮಂಜೇಶ್ವರ, ರಜತ್ ಕದ್ರಿ, ಶರಣ್ ಶೆಟ್ಟಿ ವೇಣೂರು, ಸಾಗರ ಮಡಂತ್ಯಾರ್, ರಕ್ಷಿತ ರಾವ್, ಕಾಜಲ್ ಬಂಗೇರ ನಾಟಕದಲ್ಲಿ ಅಭಿನಯಿಸಿದ್ದಾರೆ.

■ ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ

## ಅಕ್ರಮವಾಗಿ ಸಾಗಿಸುತ್ತಿದ್ದ 2.5 ಕೋಟಿ ರೂ. ಮೌಲ್ಯದ ಚಿನ್ನ ಜಪ್ತಿ

**ನಾವಿಕ,ಬೆಂಗಳೂರು,ಅ.25:-**

ಬೆಂಗಳೂರಿನ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಕಸ್ಟಮ್ಸ್ ಅಧಿಕಾರಿಗಳು ಅಕ್ರಮವಾಗಿ ಸಾಗಿಸುತ್ತಿದ್ದ 2.5 ಕೋಟಿ ರೂಪಾಯಿ ಮೌಲ್ಯದ ನಾಲ್ಕು ಕೆ.ಜಿ.ಗೂ ಹೆಚ್ಚು ಚಿನ್ನವನ್ನು ವಶಪಡಿಸಿಕೊಂಡಿದ್ದಾರೆ.

ಕಸ್ಟಮ್ಸ್ ಅಧಿಕಾರಿಗಳು ಮಂಗಳವಾರ ಅಬುಧಾಬಿಯಿಂದ ಆಗಮಿಸಿದ ಇವೈ 238 ವಿಮಾನವನ್ನು ಪರಿಶೀಲಿಸಿದ್ದು, ವಿಮಾನದ ವಾಶ್‌ರೂಮ್‌ನಲ್ಲಿ ಕಪ್ಪು ಪೌಚ್‌ನಲ್ಲಿ ಸುತ್ತಿದ ಚಿನ್ನದ ಪೇಸ್ಟ್ ಅನ್ನು ಜಪ್ತಿ ಮಾಡಿದ್ದಾರೆ.80,21,920 ರೂಪಾಯಿ ಮೌಲ್ಯದ 1331.66 ಗ್ರಾಂ ಚಿನ್ನವನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಬೆಂಗಳೂರು ಕಸ್ಟಮ್ಸ್ ಸಾಮಾಜಿಕ ಮಾಧ್ಯಮ ವೇದಿಕೆ 'ಎಕ್ಸ್'ನಲ್ಲಿ ಪೋಸ್ಟ್ ಮಾಡಿದೆ. ಇನ್ನು ಅ.22 ರಂದು ಕೌಲಾಲಂಪುರ್, ದುಬೈ ಮತ್ತು ಕೊಲಂಬೊದಿಂದ ಬಂದ ನಾಲ್ವರು ಪ್ರಯಾಣಿಕರಿಂದ 1.76 ಕೋಟಿ ರೂಪಾಯಿ ಮೌಲ್ಯದ ಅಂದಾಜು ಮೂರು ಕೆ.ಜಿ. ಚಿನ್ನವನ್ನು ಸಹ ವಶಪಡಿಸಿಕೊಳ್ಳಲಾಗಿದೆ ಎಂದು ಕಸ್ಟಮ್ಸ್ ಅಧಿಕಾರಿಗಳು ತಿಳಿಸಿದ್ದಾರೆ.



■ ನ್ಯೂಸ್‌ಕ್ಲಿಕ್ ಪ್ರಕರಣ :

## ಪುರ್ಕಾಯಸ್ಥ, ಚಕ್ರವರ್ತಿಯನ್ನು 9 ದಿನ ಪೊಲೀಸ್ ವಶಕ್ಕೆ ನೀಡಿದ ಕೋರ್ಟ್

**ನಾವಿಕ,ನವದೆಹಲಿ,ಅ.25:-**

ಚೀನಾ ಪರ ಪ್ರಚಾರಕ್ಕಾಗಿ ದೇಣಿಗೆ ಪಡೆದ ಆರೋಪದ ಮೇಲೆ ಭಯೋತ್ಪಾದನಾ ವಿರೋಧಿ ಕಾನೂನು ಯುಎಪಿಎ ಅಡಿಯಲ್ಲಿ ದಾಖಲಾಗಿರುವ ಪ್ರಕರಣದಲ್ಲಿ ಬಂಧಿತರಾಗಿರುವ ನ್ಯೂಸ್‌ಕ್ಲಿಕ್ ಸಂಸ್ಥಾಪಕ ಪ್ರಬೀರ್ ಪುರ್ಕಾಯಸ್ಥ ಮತ್ತು ಮಾನವ ಸಂಪನ್ಮೂಲ ವಿಭಾಗದ ಮುಖ್ಯಸ್ಥ ಅಮಿತ್ ಚಕ್ರವರ್ತಿ ಅವರನ್ನು ದೆಹಲಿ ನ್ಯಾಯಾಲಯ ಬುಧವಾರ 9 ದಿನ ಪೊಲೀಸರ ವಶಕ್ಕೆ ನೀಡಿ ಆದೇಶಿಸಿದೆ.





ಆರೋಪಿಗಳ 15 ದಿನಗಳ ನ್ಯಾಯಾಂಗ ಬಂಧನ ಅವಧಿ ಇಂದು ಮುಕ್ತಾಯವಾದ ಹಿನ್ನೆಲೆಯಲ್ಲಿ ಅವರನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿ, ಹೆಚ್ಚಿನ ವಿಚಾರಣೆಗಾಗಿ ತಮ್ಮ ವಶಕ್ಕೆ ನೀಡುವಂತೆ ಪೊಲೀಸರು ಮನವಿ ಮಾಡಿದರು.

ಪೊಲೀಸರ ಮನವಿ ಪುರಸ್ಕರಿಸಿದ ದೆಹಲಿ ನ್ಯಾಯಾಲಯ, ಪ್ರಬೀರ್ ಪುರ್ಕಾಯಸ್ಥ ಮತ್ತು ಅಮಿತ್ ಚಕ್ರವರ್ತಿ ಅವರನ್ನು ನವೆಂಬರ್ 2, 2023ರ ವರೆಗೆ ಪೊಲೀಸ್ ಕಸ್ಟಡಿಗೆ ನೀಡಿದೆ.

ಪುರ್ಕಾಯಸ್ಥ ಮತ್ತು ಚಕ್ರವರ್ತಿ ಅವರನ್ನು ದೆಹಲಿ ಪೊಲೀಸರ ವಿಶೇಷ ಘಟಕ ಅಕ್ಟೋಬರ್ 3 ರಂದು ಬಂಧಿಸಿದ್ದು, ದೆಹಲಿ ಯಲ್ಲಿರುವ ನ್ಯೂಸ್‌ಕ್ಲಿಕ್ ಕಚೇರಿಯನ್ನು ಸೀಲ್ ಮಾಡಿದ್ದಾರೆ ಮತ್ತು ಪ್ರಕರಣಕ್ಕೆ ಸಂಬಂಧಿಸಿದಂತೆ ಹಲವಾರು ಪತ್ರಕರ್ತರನ್ನು ವಿಚಾರಣೆಗೊಳಪಡಿಸಲಾಗಿದೆ.

## ಭಾರತೀಯ ಮೂಲದ ವಿಜ್ಞಾನಿಗಳಿಗೆ ಅಮೆರಿಕದ ರಾಷ್ಟ್ರೀಯ ಪ್ರಶಸ್ತಿ

**ನಾವಿಕ,ವಾಷಿಂಗ್ಟನ್,ಅ.25:-**

ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರಕ್ಕೆ ನೀಡಿದ ಕೊಡುಗೆಗಾಗಿ ಅಮೆರಿಕ ಅಧ್ಯಕ್ಷ ಜೋ ಬೈಡೆನ್ ಅವರು ಭಾರತೀಯ ಮೂಲದ ಇಬ್ಬರು ಅಮೆರಿಕನ್ ವಿಜ್ಞಾನಿಗಳಾದ ಅಶೋಕ್ ಗಾಡ್ಗೀಲ್ ಮತ್ತು ಸುಬ್ರಾ ಸುರೇಶ್ ಅವರಿಗೆ ದೇಶದ ಅತ್ಯುನ್ನತ ರಾಷ್ಟ್ರೀಯ ವಿಜ್ಞಾನ ಪ್ರಶಸ್ತಿ ನೀಡಿ ಗೌರವಿಸಿದ್ದಾರೆ.

ತಂತ್ರಜ್ಞಾನ ಮತ್ತು ನಾವೀನ್ಯತೆಗಾಗಿ ಯುಸಿ ಬರ್ಕ್ಲಿಯಲ್ಲಿ ಸಿವಿಲ್ ಮತ್ತು ಎನ್ವಿರಾನ್ಮೆಂಟಲ್ ಇಂಜಿನಿಯರಿಂಗ್‌ನ ಪ್ರೊಫೆಸರ್ ಎಮೆರೈಟಸ್ ಅಶೋಕ್ ಗಾಡ್ಗಿಲ್ ಅವರಿಗೆ ಪ್ರತಿಷ್ಠಿತ ಶ್ವೇತಭವನ ರಾಷ್ಟ್ರೀಯ ಪದಕವನ್ನು ಬೈಡನ್ ಪ್ರದಾನ ಮಾಡಿದರು.

ತಂತ್ರಜ್ಞಾನ ಮತ್ತು ನಾವೀನ್ಯತೆಗಾಗಿ ಶ್ವೇತಭವನದ ರಾಷ್ಟ್ರೀಯ ಪದಕವನ್ನು ಪಡೆದ 12 ಮಂದಿಯಲ್ಲಿ ಅಶೋಕ್ ಗಾಡ್ಗೀಲ್ ಅವರು ಒಬ್ಬರಾಗಿದ್ದಾರೆ.

ಇಂಜಿನಿಯರಿಂಗ್, ಭೌತಿಕ ವಿಜ್ಞಾನ ಮತ್ತು ಜೀವ ವಿಜ್ಞಾನದಲ್ಲಿನ ಸಂಶೋಧನೆಗಾಗಿ ಮತ್ತು ವಿಶೇಷವಾಗಿ ವಸ್ತು ವಿಜ್ಞಾನದ ಅಧ್ಯಯನಕ್ಕಾಗಿ ಬ್ರೌನ್ ಯೂನಿವರ್ಸಿಟಿಯ ಸ್ಕೂಲ್ ಆಫ್ ಇಂಜಿನಿಯರಿಂಗ್‌ನಲ್ಲಿ ಹಿರಿಯ ಪ್ರಾಧ್ಯಾಪಕರಾಗಿರುವ ಸುಬ್ರಾ ಸುರೇಶ್ ಅವರಿಗೆ ರಾಷ್ಟ್ರೀಯ ವಿಜ್ಞಾನ ಪದಕವನ್ನು ನೀಡಿ ಗೌರವಿಸಲಾಗಿದೆ.

ನಾವಿಕ

ಇದು ಸಾಹಿತ್ಯ, ಸಾಂಸ್ಕೃತಿಕ ಚಿಂತನ-ಮಂಥನಗಳ ಹೂರಣ....

## ಸತ್ಸಂಗ ಸ್ಫೂರ್ತಿ



✍...ಡಾ. ಗುರುರಾಜ ಪೋಶೆಟ್ಟಿಹಳ್ಳಿ


### ಪರ್ವತಗಳೇಕೆ ಕುಂತಲ್ಲೇ ಕುಂತಿವೆ

ನಾವು ನಮ್ಮ ರಾಜ್ಯ ಅಥವಾ ದೇಶ, ಅಥವಾ ವಿದೇಶಗಳಲ್ಲಿ ವಿಚಿತ್ರವಾಗಿರುವ ಬೆಟ್ಟಗಳು, ಗುಡ್ಡಗಳು, ಪರ್ವತಗಳು ಶಿಖರಗಳು ಎಲ್ಲವನ್ನು ನೋಡಿರುತ್ತೇವೆ. ಕೆಲವೊಂದು ಏಕಾಶಿಲಬೆಟ್ಟಗಳು ಇರುತ್ತವೆ. ಇದೆಲ್ಲವನ್ನು ನೋಡಿ ದಾಗ ಪ್ರಕೃತಿಯ ವಿಚಿತ್ರ ಸೃಷ್ಟಿಸಿದವರು ಯಾರು ಇದೆಲ್ಲವನ್ನು ನಮಗೆ ಕಾಡುತ್ತದೆ. ಅಷ್ಟಕ್ಕೂ ಈ ಪರ್ವತಗಳ ಕಥೆಗೆ ವ್ಯಜ್ಞಾನಿಕವಾಗಿ ಯಾವುದೇ ಕಾರಣಗಳು ಸಮಂಜಸವಾಗಿ ಸಿಗುವುದಿಲ್ಲ. ಆದರೆ ನಮ್ಮ ಪುರಾಣಗಳು ಇದಕ್ಕೆ ಉತ್ತಮ ಕಾರಣವನ್ನು ಕೊಡುತ್ತವೆ. ಅನೇಕ ಪರ್ವತಗಳು ದೇವರ ಆಶೀರ್ವಾದದಿಂದ ದೇವರ ಸೇವೆಗೆ ಪಾತ್ರವಾಗಿವೆ. ಇನ್ನು ಕೆಲವು ಖಾಯಿಲೆ ಗಳನ್ನು ಗುಣಪಡಿಸುವುದರ ಮೂಲಕ ಜನರ ಸೇವೆಗೆ ಸಾಕ್ಷಿಯಾಗಿದೆ. ಆಂಜೇನೇಯ ಹೊತ್ತುತಂದ ಸಂಜೀವಿನ ಪರ್ವತ ಇದಕ್ಕೆ ಉತ್ತಮ ಉದಾಹರಣೆ.

ಹಿಂದೆ ಈ ಪರ್ವತಗಳಿಗೆ ರಕ್ಕೆ ಇದ್ದವು ಆಹಾರಕ್ಕಾಗಿ ಅವು ಎಲ್ಲಿ ಬೇಕಾದರೂ ಹಾರ ಬಹುದಿತ್ತು ಮತ್ತೆ ಬೇಡ ಎಂದರೆ ಅಲ್ಲಿಂದ ಹೋಗಬಹುದಿತ್ತು. ಹೀಗಿದ್ದಾಗ ಈ ಪರ್ವತಗಳು ಕೆಲವೊಮ್ಮೆ ಋಷಿಮುನಿಗಳು ಯಜ್ಞ ಯಾಗಾದಿಗಳನ್ನು ಮಾಡುವಾಗ, ತಪಸ್ಸನ್ನು ಆಚರಿಸುವಾಗ ಅವರ ಮೇಲೆಯೇ ಬಂದು ಕುಳಿತುಬಿಡುತ್ತಿದ್ದವು. ಇದರಿಂದ ಸಿಟ್ಟಿಗೆದ್ದ ಋಷಿ ಮುನಿಗಳು ಇಂದ್ರನನ್ನು ಕುರಿತು ತಪಸ್ಸು ಮಾಡಿ ಅವನಿಗೆ ಈ ಪರ್ವತಗಳ ಉಪದ್ರವವನ್ನು ಹೇಳಿದಾಗ ಸಿಟ್ಟಿಗೆದ್ದ ಇಂದ್ರ ತನ್ನ ವಜ್ರಾಯುಧದಿಂದ ಎಲ್ಲಾ ಪರ್ವತಗಳ ರೆಕ್ಕೆಗಳನ್ನು ಕತ್ತರಿಸಿದನು, ಹಾಗೂ ಮತ್ತೆ ಎಂದಿಗೂ ಪರರಿಗೆ ಉಪದ್ರವಕೊಡದಂತೆ ಎಚ್ಚರಿಸಿ ನೀವು ಚಲಿಸಲು ಆಗದಂತೆ ಕುಳಿತಲ್ಲಿಯೇ ಕೂರುವಂತೆ ಶಾಪಕೊಟ್ಟನು. ಅದರಂತೆ ಎಲ್ಲಾ ಪರ್ವತಗಳು ಇಂದು ಕುಳಿತ ಜಾಗದಲ್ಲಿ ಕುಳಿತಿರುತ್ತವೆ. ಆದರೆ ಇದರಿಂದ ಒಂದು ಪರ್ವತ ಮಾತ್ರ ಇಂದ್ರನಿಂದ ತಪ್ಪಿಸಿಕೊಂಡು ಹೋಗಿ ಸಮುದ್ರದಲ್ಲಿ ಅಡಗಿ ಕುಳಿತಿತ್ತು, ಆ ಪರ್ವತವೇ ''ಮೈನಾಕ'' ಪರ್ವತ.

ರಾಮಾಯಣದಲ್ಲಿ ಹನುಮಂತನು ಸಮುದ್ರವನ್ನು ಹಾರುವಾಗ ಅವನಿಗೆ ವಿಶ್ರಮಿಸಲು ಸಹಾಯ ಮಾಡಲು ಸಮುದ್ರದಿಂದ ಮೇಲೆ ಬಂದು ಅವನಿಗೆ ಸಹಾಯ ಮಾಡಿ, ಇಂದ್ರನಿಂದ ತನ್ನ ರೆಕ್ಕೆಗಳನ್ನು ಹಾಗೆ ಉಳಿಸಿಕೊಂಡ ಏಕೈಕ ಪರ್ವತ. ಹೀಗೆ ಪರ್ವತಗಳಿಗೂ ಕೊಡ ರಕ್ಕೆಯ ಜೊತೆ ಜೀವವು ಇದೆ. ಅದರಿಂದಲೇ ನಾವು ಇಂದಿಗೂ ಕೆಲವೊಂದು ಕಡೆ ಪರ್ವತಗಳಿಗೆ ಪೂಜೆ ಮಾಡುತ್ತೇವೆ.

## ವಿಜಯಪುರವಾದ ಬಿಜಾಪುರ : ಮತ್ತೆ ಜಿಲ್ಲೆಯ ಹೆಸರು ಬದಲಿಸಲು ಸರ್ಕಾರದ ನಿರ್ಧಾರ !



ವಿಜಯಪುರ : 2014ರಲ್ಲಿ ಬಿಜಾಪುರವನ್ನು ವಿಜಯಪುರ ಎಂದು ಮರುನಾಮಕರಣ ಮಾಡಿದ ಕಾಂಗ್ರೆಸ್ ಸರ್ಕಾರ ಮತ್ತೆ ಜಿಲ್ಲೆಗೆ ಹೊಸ ನಾಮಕರಣ ಮಾಡುವತ್ತ ಗಮನಹರಿಸಿದೆ.

ಬಸವೇಶ್ವರರು ವಿಜಯಪುರ ಜಿಲ್ಲೆಯ ಬಸವನಬಾಗೇವಾಡಿ ತಾಲ್ಲೂಕಿನಲ್ಲಿ ಜನಿಸಿದರು, 12ನೇ ಶತಮಾನದ ಸಮಾಜ ಸುಧಾರಕರಾಗಿದ್ದ ಬಸವೇಶ್ವರರ ಹೆಸರನ್ನು ವಿಜಯಪುರಕ್ಕೆ ಮರುನಾಮಕರಣ ಮಾಡಲು ಸರ್ಕಾರ ಮುಂದಾಗಿದೆ. ಈ ಸಂಬಂಧ ಸರ್ಕಾರ ಅಧಿಸೂಚನೆ ಹೊರಡಿಸಿದೆ ಎಂದು ಜಿಲ್ಲಾಧಿಕಾರಿ ಟಿ. ಭೂಬ್ಲನ್ ತಿಳಿಸಿದ್ದಾರೆ. ಸಮಾನತೆ ಮತ್ತು ಸಾಮಾಜಿಕ ನ್ಯಾಯಕ್ಕಾಗಿ ಶ್ರಮಿಸಿದ ಬಸವೇಶ್ವರರ ಹೆಸರನ್ನು ಜಿಲ್ಲೆಗೆ ಮರುನಾಮಕರಣ ಮಾಡಲು ಸರ್ಕಾರ ಮುಂದಾಗಿದೆ ಎಂದು ಅಧಿ ಸೂಚನೆಯಲ್ಲಿ ಪ್ರಕಟಿಸಲಾಗಿದೆ.

ಬಸವೇಶ್ವರರ ಕೊಡುಗೆಗಳನ್ನು ಪರಿಗಣಿಸಿ ಸರ್ಕಾರವು ಜಿಲ್ಲೆಯನ್ನು 'ಬಸವೇಶ್ವರ ಜಿಲ್ಲೆ' ಅಥವಾ 'ಬಸವ ಜಿಲ್ಲೆ' ಎಂದು ಮರುನಾಮಕರಣ ಮಾಡಲು ಬಯಸಿದೆ. ಈ ನಿಟ್ಟಿನಲ್ಲಿ ಸರ್ಕಾರವು ಚುನಾಯಿತ ಪ್ರತಿನಿಧಿಗಳು, ಗಣ್ಯರು, ಎನ್‌ಜಿಒಗಳು ಮತ್ತು ಸಾರ್ವಜನಿಕರ ಅಭಿಪ್ರಾಯವನ್ನು ಕೇಳಿದೆ. 15 ದಿನಗಳೊಳಗೆ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಳ್ಳುವಂತೆ ಸರ್ಕಾರ ಜನರಲ್ಲಿ ಮನವಿ ಮಾಡಿದೆ.

ಇದೇ ವೇಳೆ ಕಾಂಗ್ರೆಸ್, ದಲಿತ ಸಮುದಾಯದ ಕೆಲವರು ಸೇರಿದಂತೆ ಹಲವು ಮುಖಂಡರು, ಇತಿಹಾಸಕಾರರು ಜಿಲ್ಲೆಗೆ ಮತ್ತೆ ನಾಮಕರಣ ಮಾಡುವ ವಿಚಾರವನ್ನು ಬೆಂಬಲಿಸುವುದಿಲ್ಲ ಎಂದು ಹೇಳಿದ್ದಾರೆ.

ಇದು ಅನಗತ್ಯ ಎಂದಿರುವ ಅವರು, ಜಿಲ್ಲೆಯ ಹೆಸರನ್ನು ಮರುನಾಮಕರಣ ಮಾಡುವ ಬದಲು ಸರ್ಕಾರ ಅಭಿವೃದ್ಧಿಗೆ ಆದ್ಯತೆ ನೀಡಬೇಕು ಎಂದರು. ಜಿಲ್ಲೆಯ ಹೆಸರನ್ನು ಮತ್ತೆ ಮರುನಾಮಕರಣ ಮಾಡುವ ಅಗತ್ಯವಿಲ್ಲ ಎಂದು ಇತಿಹಾಸಕಾರ, ಲೇಖಕ ಹಾಗೂ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಕೃಷ್ಣ ಕೊಲ್ಹಾರ ಕುಲಕರ್ಣಿ ಅಭಿಪ್ರಾಯ ಪಟ್ಟಿದ್ದಾರೆ.

ಬಿಜಾಪುರ ಹೆಸರನ್ನು ವಿಜಯಪುರ ಎಂದು ಬದಲಾಯಿಸುವ ಸರ್ಕಾರದ ನಿರ್ಧಾರವನ್ನು ನಾನು ವಿರೋಧಿಸಿದ್ದೆ. ಮೂರು ಶತಮಾನಗಳಿಂದ ಈ ಪ್ರದೇಶವನ್ನು ಬಿಜಾಪುರ ಎಂದು ಗುರುತಿಸಲಾಗಿದೆ.

ವಿನಾಕಾರಣ ವಿಜಯಪುರ ಎಂದು ಹೆಸರು ಬದಲಿಸಲಾಗಿದೆ. ಸರ್ಕಾರವು ಜಿಲ್ಲೆಯ ಹೆಸರನ್ನು ಮತ್ತೆ ಬದಲಾಯಿಸಲು ಬಯಸಿದೆ, ಇದು ತಪ್ಪು ಎಂದು ಪ್ರತಿಪಾದಿಸಿದ್ದಾರೆ.

ಬಸವೇಶ್ವರರು ಹುಟ್ಟಿದ ಬಸವನಬಾಗೇವಾಡಿ ತಾಲೂಕನ್ನು ಅಭಿವೃದ್ಧಿಪಡಿಸಬಹುದು. ಅವರ ಹೆಸರಲ್ಲಿ ಈಗಾಗಲೇ 'ಬಸವ ಎಕ್ಸ್ ಪ್ರೆಸ್' ರೈಲು ಇದ್ದು, ಇಲ್ಲಿನ ಹೊಸ ವಿಮಾನ ನಿಲ್ದಾಣಕ್ಕೆ ಬಸವೇಶ್ವರರ ಹೆಸರಿಡುವ ಪ್ರಸ್ತಾವನೆ ಇದೆ. ಮತ್ತೆ ಜಿಲ್ಲೆಯ ಹೆಸರನ್ನು ಬದಲಾಯಿಸುವ ಅಗತ್ಯವಿಲ್ಲ ಎಂದು ಹೇಳಿದರು.

**ಬಸವೇಶ್ವರರ ಕೊಡುಗೆಗಳನ್ನು ಪರಿಗಣಿಸಿ ಸರ್ಕಾರವು ಜಿಲ್ಲೆಯನ್ನು 'ಬಸವೇಶ್ವರ ಜಿಲ್ಲೆ' ಅಥವಾ 'ಬಸವ ಜಿಲ್ಲೆ' ಎಂದು ಮರುನಾಮಕರಣ ಮಾಡಲು ಬಯಸಿದೆ.**
**ಈ ನಿಟ್ಟಿನಲ್ಲಿ ಸರ್ಕಾರವು ಚುನಾಯಿತ ಪ್ರತಿನಿಧಿಗಳು, ಗಣ್ಯರು, ಎನ್‌ಜಿಒಗಳು ಮತ್ತು ಸಾರ್ವಜನಿಕರ ಅಭಿಪ್ರಾಯವನ್ನು ಕೇಳಿದೆ. 15 ದಿನಗಳೊಳಗೆ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಳ್ಳುವಂತೆ ಸರ್ಕಾರ ಜನರಲ್ಲಿ ಮನವಿ ಮಾಡಿದೆ.**

# ಫೈಲೇರಿಯಾ ಎಂಬ ಸೂಕ್ಷ್ಮಾಣುಜೀವಿ ಜಂತುಹುಳುವಿನಿಂದ ಆನೆಕಾಲು ರೋಗ ಹರಡುವಿಕೆ





ಡಾ. ವಸುಂಧರಾ ಭೂಪತಿ

ಆನೆಕಾಲು ರೋಗ ಪಸರಿಸುವುದು ಕ್ಯೂಲೆಕ್ಸ್ ಎಂಬ ಸೊಳ್ಳೆ. ಈ ಸೊಳ್ಳೆಯಲ್ಲಿ ಫೈಲೇರಿಯಾ ಎಂಬು ಸೂಕ್ಷ್ಮಾಣುಜೀವಿ ಜಂತುಹುಳ ಸೇರಿಕೊಂಡಿರುತ್ತದೆ.

ಆನೆಕಾಲು ರೋಗ (ಲಿಂಫಾಟಿಕ್ ಫೈಲೇರಿಯಾಸಿಸ್-ಎಲಿಫೆಂಟಿಯಾಸಿಸ್) ಸೊಳ್ಳೆ ಕಡಿತದ ಮೂಲಕ ಮನುಷ್ಯರಿಗೆ ಹರಡುವ ಪರಾವಲಂಭಿ ಸೂಕ್ಷ್ಮಾಣುಜೀವಿ ಸೋಂಕು. ಈ ಸೋಂಕು ತೋಳುಗಳು, ಕಾಲುಗಳು ಮತ್ತು ಜನನಾಂಗಗಳಲ್ಲಿ ಊತವನ್ನು ಉಂಟುಮಾಡಬಹುದು. ಕಾಲುಗಳು ಊದಿಕೊಂಡು ಆನೆಗಳ ಕಾಲುಗಳಂತೆ ಕಾಣುತ್ತವೆ. ಆದ್ದರಿಂದಲೇ ಈ ರೋಗಕ್ಕೆ ಆನೆಕಾಲು ರೋಗ ಎಂಬ ಹೆಸರು ಬಂದಿದೆ. ಈ ರೋಗ ದುಗ್ಧರಸ ವ್ಯವಸ್ಥೆಯನ್ನು ದುರ್ಬಲಗೊಳಿಸುತ್ತದೆ ನೋವು, ತೀವ್ರ ಅಂಗವೈಫಲ್ಯ ಮತ್ತು ಸಾಮಾಜಿಕ ಕಳಂಕವನ್ನು ಉಂಟು ಮಾಡುತ್ತದೆ.

**ಆನೆಕಾಲು ರೋಗ ಹೇಗೆ ಬರುತ್ತದೆ ?**

ಆನೆಕಾಲು ರೋಗ ಪಸರಿಸುವುದು ಕ್ಯೂಲೆಕ್ಸ್ ಎಂಬ ಸೊಳ್ಳೆ. ಈ ಸೊಳ್ಳೆಯಲ್ಲಿ ಫೈಲೇರಿಯಾ ಎಂಬು ಸೂಕ್ಷ್ಮಾಣುಜೀವಿ ಜಂತುಹುಳ ಸೇರಿಕೊಂಡಿರುತ್ತದೆ. ಜನರಿಗೆ ಈ ಸೊಳ್ಳೆಯು ಕಚ್ಚಿದಾಗ ದೇಹದೊಳಕ್ಕೆ ಪ್ರವೇಶಿಸಿ ಅದು ದುಗ್ಧರಸ ಗ್ರಂಥಿಗಳಲ್ಲಿ ಶೇಖರಣೆಯಾಗಿ, ರಕ್ತ ಪರಿಚಲನೆಯಾಗದೆ ಅಲ್ಲಿಂದ ಮುಂದಿನ ದೇಹದ ಭಾಗ ಸಂಪೂರ್ಣವಾಗಿ ಊದಿಕೊಳ್ಳತೊಡಗುತ್ತದೆ. ದೇಹದೊಳಗಿರುವ ಹುಳ ಸಾವನ್ನಪ್ಪಿದರೂ ದೇಹದ ಊತ ಶಾಶ್ವತವಾಗಿ ಉಳಿದುಕೊಳ್ಳುತ್ತದೆ. ಮುಖ್ಯವಾಗಿ ಕಾಲು, ಕೈ, ಎದೆಯ ಭಾಗಗಳಲ್ಲಿ ಊದುವಿಕೆ ಕಾಣಿಸಿಕೊಳ್ಳುತ್ತದೆ.

ತೆರೆದ ಚರಂಡಿಗಳು, ರಾಡಿ ಹಾಗೂ ಕೊಳಕು ಪ್ರದೇಶಗಳಲ್ಲಿ ವಾಸಿಸುವ ಈ ಸೊಳ್ಳೆ ವಾಸಿಸುತ್ತದೆ. ರಾತ್ರಿ ಹೊತ್ತಿನಲ್ಲಿ ಕ್ರಿಯಾಶೀಲವಾಗುವ ಕ್ಯೂಲೆಕ್ಸ್ ಸೊಳ್ಳೆಯು ಜನರನ್ನು ಕಚ್ಚಿದರೆ ರಕ್ತದಲ್ಲಿ ಈ ರೋಗದ ಲಕ್ಷಣಗಳು ಕಂಡು ಬರುತ್ತವೆ. ನಮ್ಮ ರಾಜ್ಯದಲ್ಲಿ ಕೆಲವೆಡೆ ನೇಕಾರರು ರಾತ್ರಿಯಿಡಿ ನೇಕಾರಿಕೆ ಕೈಗೊಳ್ಳುತ್ತಿದ್ದುದರಿಂದ ಸೊಳ್ಳೆಗಳು ಕಚ್ಚಿ ರೋಗದ ಬಾಧೆಗೊಳಗಾಗಿದ್ದರು. ಈ ರೋಗ ಬರಲು ಕೆಲವು ತಿಂಗಳುಗಳಿಂದ ಹಲವಾರು ವರ್ಷಗಳವರೆಗೆ ಸೊಳ್ಳೆಗಳು ಕಚ್ಚುತ್ತಲೇ ಇರಬೇಕು. ರೋಗಕಾರಕ ಸೊಳ್ಳೆ ಕಡಿತಕ್ಕೆ ಒಳಗಾಗಿ ಮೂರು ವರ್ಷಗಳಿಂದ ಹಿಡಿದು ಹತ್ತು ವರ್ಷಗಳ ತನಕ ಈ ರೋಗಲಕ್ಷಣಗಳು ಕಾಣಿಸಿಕೊಳ್ಳಬಹುದು.

**ಆನೆಕಾಲು ರೋಗವನ್ನು ಪತ್ತೆ ಮಾಡುವುದು ಹೇಗೆ ?**

ರಾತ್ರಿ ವೇಳೆಯಲ್ಲಿ ಮಾತ್ರ ಈ ರೋಗವನ್ನು ಕಂಡು ಹಿಡಿಯಬಹುದಾಗಿದೆ. ಏಕೆಂದರೆ ಈ ಸೂಕ್ಷ್ಮಾಣುಜೀವಿಗಳು ರಾತ್ರಿ ವೇಳೆಯಲ್ಲಿ ಮಾತ್ರ ರಕ್ತ ಸಂಚಾರದಲ್ಲಿ ಕಾಣಿಸಿಕೊಳ್ಳುವುದರಿಂದ, ರಾತ್ರಿ 8 ರಿಂದ ಮಧ್ಯರಾತ್ರಿ 12ರ ವರೆಗೆ ರಕ್ತ ಸಂಗ್ರಹಿಸಿ, ಸೂಕ್ಷ್ಮದರ್ಶಕದ ಸಹಾಯದಿಂದ ಪರೀಕ್ಷೆ ಮಾಡಿದಾಗ ಮಾತ್ರ ಈ ರೋಗದ ಸೋಂಕು ತಿಳಿಯುತ್ತದೆ. ಪ್ರಾರಂಭದಲ್ಲೇ ಚಿಕಿತ್ಸೆ ಪಡೆದರೆ ಈ ರೋಗದ ಬಾಹ್ಯ ಲಕ್ಷಣಗಳನ್ನು ಹಾಗೂ ಈ ರೋಗವು ಇತರರಿಗೆ ಹರಡುವುದನ್ನು ತಡೆಗಟ್ಟಬಹುದು.

ಪ್ರಪಂಚದಾದ್ಯಂತ 44 ದೇಶಗಳಲ್ಲಿ 882 ದಶಲಕ್ಷಕ್ಕೂ ಹೆಚ್ಚು ಜನರು ಈ ರೋಗದಿಂದ ನರಳುತ್ತಿದ್ದಾರೆ. ಭಾರತದಲ್ಲಿ ಇದರ ಶೇ.40ರಷ್ಟು ರೋಗಿಗಳು ಇದ್ದಾರೆ. ಈ ರೋಗ ಭಾರತದಲ್ಲಿ ಗಂಭೀರವಾದ ಸಾರ್ವಜನಿಕ ಆರೋಗ್ಯ ಸಮಸ್ಯೆಯಾಗಿದೆ. ಹದಿನಾರು ರಾಜ್ಯಗಳು ಮತ್ತು ಐದು ಕೇಂದ್ರಾಡಳಿತ ಪ್ರದೇಶಗಳ 256 ಜಿಲ್ಲೆಗಳ ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಈ ರೋಗವು ಹರಡಿದೆ. ಬಡವರೇ ಈ ಸೋಂಕುರೋಗಕ್ಕೆ ಹೆಚ್ಚಾಗಿ ತುತ್ತಾಗಿದ್ದಾರೆ. ಈ ಸೋಂಕು ಬಾಲ್ಯದಲ್ಲಿ ಪ್ರಾರಂಭವಾಗುತ್ತದೆ ಮತ್ತು ಕ್ರಮೇಣ ಹೆಚ್ಚಾಗುತ್ತದೆ. ಭಾರತವು 2027ರ ವೇಳೆಗೆ ಈ ರೋಗವನ್ನು ಸಂಪೂರ್ಣವಾಗಿ ತೊಡೆದುಹಾಕುವ ಗುರಿಯನ್ನು ಹಾಕಿಕೊಂಡು ಈ ದಿಸೆ ಯಲ್ಲಿ ಸತತ ಕಾರ್ಯನಿರತವಾಗಿದೆ.

**ಆನೆಕಾಲು ರೋಗದ ಲಕ್ಷಣಗಳು**

ಈ ಉರಿಯೂತ ರೋಗದ ಲಕ್ಷಣಗಳು ತೋಳುಗಳು, ಕಾಲುಗಳು ಮತ್ತು/ಅಥವಾ ಜನನಾಂಗಗಳಲ್ಲಿ ಊತ, ಬಾಧಿತ ಪ್ರದೇಶಗಳಲ್ಲಿ ದಪ್ಪನಾದ ಮತ್ತು ಗಟ್ಟಿಯಾದ ಧರ್ಮ, ನೋವು ಮತ್ತು ಅಸ್ವಸ್ಥತೆ, ಬಾಧಿತ ಪ್ರದೇಶಗಳಲ್ಲಿ ಪುನರಾವರ್ತಿತ ಸೋಂಕುಗಳು, ದುರ್ಬಲ ಚಲನಶೀಲತೆ. ಈ ರೋಗಕ್ಕೆ ಯಾವುದೇ ಚಿಕಿತ್ಸೆ ಇಲ್ಲ. ಆದರೆ ಚಿಕಿತ್ಸೆಯು ರೋಗಲಕ್ಷಣಗಳನ್ನು ನಿರ್ವಹಿಸಲು ಮತ್ತು ತೊಡಕುಗಳನ್ನು ತಡೆಯಲು ಸಹಾಯ ಮಾಡುತ್ತದೆ.

**ಆನೆಕಾಲು ರೋಗಕ್ಕೆ ಚಿಕಿತ್ಸೆ**

ಹಲವಾರು ಆಂಟಿಪ್ಯಾರಾಸಿಟಿಕ್ ಔಷಧಿಗಳು ಆನೆಕಾಲು ಉರಿಯೂತವನ್ನು ಉಂಟುಮಾಡುವ ಹುಳುಗಳನ್ನು ಕೊಂದು ರೋಗಲಕ್ಷಣಗಳ ತೀವ್ರತೆಯನ್ನು ಕಡಿಮೆ ಮಾಡಬಹುದು. ತೀವ್ರತರವಾದ ಪ್ರಕರಣಗಳಲ್ಲಿ ಹೆಚ್ಚುವರಿ ಅಂಗಾಂಶವನ್ನು ತೆಗೆದುಹಾಕಲು ಮತ್ತು ಚಲನಶೀಲತೆಯನ್ನು ಸುಧಾರಿಸಲು ಶಸ್ತ್ರಚಿಕಿತ್ಸೆ ಅಗತ್ಯವಾಗಬಹುದು. ರೋಗಬಾಧಿತ ಜಾಗಗಳನ್ನು ಆಗಾಗ ಶುದ್ಧಮಾಡಬೇಕು. ಮುಲಾಮು ಹಚ್ಚಬೇಕು. ವೈದ್ಯರು ಹೇಳುವ ವ್ಯಾಯಾಮಗಳನ್ನು ತಪ್ಪದೇ ಮಾಡಬೇಕು.

ಎಲ್ಲಕ್ಕಿಂತ ಮುಖ್ಯವಾಗಿ ಸೊಳ್ಳೆಗಳನ್ನು ನಿಯಂತ್ರಣ ಮಾಡುವುದು ಆನೆ ಉರಿಯೂತವನ್ನು ತಡೆಗಟ್ಟುವಲ್ಲಿ ಪ್ರಮುಖವಾಗಿದೆ. ಸೊಳ್ಳೆ ಪರದೆಗಳ ಬಳಕೆ, ಕೀಟ ನಿವಾರಕ ಮತ್ತು ರಕ್ಷಣಾತ್ಮಕ ಬಟ್ಟೆಗಳನ್ನು ಧರಿಸುವುದರ ಮೂಲಕ ಇದನ್ನು ಸಾಧಿಸಬಹುದು. ಮನೆಯಲ್ಲಿ ಮತ್ತು ಸುತ್ತಮುತ್ತಲ ಪರಿಸರದಲ್ಲಿ ಉತ್ತಮ ನೈರ್ಮಲ್ಯವನ್ನು ಸದಾಕಾಲ ಪಾಲಿಸಬೇಕು. ಕೈಗಳನ್ನು ನಿಯಮಿತವಾಗಿ ತೊಳೆಯಬೇಕು. ಕಲುಷಿತ ನೀರಿನಲ್ಲಿ ಈಜುವುದನ್ನು ತಪ್ಪಿಸಬೇಕು ಏಕೆಂದರೆ ಇದು ಸೋಂಕಿನ ಅಪಾಯವನ್ನು ಹೆಚ್ಚಿಸುತ್ತದೆ. ಕೆಲವು ಲಸಿಕೆಗಳು ಕೆಲವು ವಿಧದ ಪರಾವಲಂಬಿ ಸೋಂಕುಗಳಿಂದ ರಕ್ಷಿಸಬಹುದು, ಆದ್ದರಿಂದ ವ್ಯಾಕ್ಸಿನೇಷನ್ ಆಯ್ಕೆಗಳ ವೈದ್ಯರಿಂದ ಮಾಹಿತಿ ಪಡೆದು ಅವುಗಳನ್ನು ತಪ್ಪದೇ ತೆಗೆದು ಕೊಳ್ಳಬೇಕು. ಜನರು ವಾಸಿಸುವ ಮನೆಗಳ ಕಿಟಕಿ ಬಾಗಿಲುಗಳಿಗೆ ಕೀಟ ತಡೆಗಟ್ಟುವ ಜಾಲರಿಗಳನ್ನು ಅಳವಡಿಸು ವುದು ಮತ್ತು ಮನೆ ಸುತ್ತಮುತ್ತಲಿನ ಚರಂಡಿಗಳಲ್ಲಿ ನೀರು ಸರಾಗವಾಗಿ ಹರಿದು ಹೋಗುವಂತೆ ವ್ಯವಸ್ಥೆ ಮಾಡುವುದು ಬಹಳ ಮುಖ್ಯ.

ಕಾಸರಗೋಡಿನ ಚರ್ಮರೋಗತಜ್ಞ ಎಸ್.ಆರ್. ನರಹರಿ ಈ ಕಾಯಿಲೆಗೊಂದು ಸಂಯೋಜಿತ ಚಿಕಿತ್ಸಾ ವಿಧಾನವೊಂದನ್ನು ಕಂಡುಹಿಡಿದು ಬಲೂನಿನಂತೆ ಊದಿಕೊಂಡ ಕಾಲುಗಳಿಂದ ಬಳಲುತ್ತಿದ್ದವರ ಹೊರೆಯನ್ನೆಲ್ಲಾ ಕಳಚಿಸಿ ಖುಷಿಯಿಂದ ಓಡಾಡುವಂತೆ ಮಾಡಿದ್ದಾರೆ. ತಾವೇ ಸ್ಥಾಪಿಸಿರುವ ಇನ್ಸ್ಟಿಟ್ಯೂಟ್ ಆಫ್ ಅಪ್ಲೈಡ್ ಡರ್ಮಟಾಲಜಿಯಲ್ಲಿ(ಐಎಡಿ) ಈ ಚಿಕಿತ್ಸೆ ನೀಡುತ್ತಿದ್ದಾರೆ.

ಪರಂಪರಾಗತ ಆಯುರ್ವೇದ ಮತ್ತು ಯೋಗ ಪದ್ಧತಿಗಳಲ್ಲಿ ಲಭ್ಯವಿರುವ ರೋಗ ಉಪಶಮನದ ಕ್ರಮಗಳನ್ನು, ಗಿಡಮೂಲಿಕೆಗಳಿಂದ ಸಿದ್ಧಪಡಿಸಿದ ಔಷಧಿಗಳನ್ನು ಅಲೋಪಥಿ ವಿಧಾನದೊಂದಿಗೆ ಬೆರೆಸಿ ಆನೆಕಾಲು ರೋಗಕ್ಕೆ ಸಂಯೋಜಿತ ಚಿಕಿತ್ಸಾ ಪದ್ಧತಿಯೊಂದನ್ನು ರೂಪಿಸಿರುವುದು ಡಾ. ನರಹರಿ ಅವರ ಹೆಗ್ಗಳಿಕೆ. ಹೆಚ್ಚಿನ ವಿವರಗಳಿಗಾಗಿ ರೋಗಿಗಳು ಮತ್ತು ಆಸಕ್ತರು www.iad.org.in ಜಾಲತಾಣವನ್ನು ಸಂಪರ್ಕಿಸಬಹುದು.

# ಅ.26 : ಆರ್. ಶ್ರೀನಿವಾಸ್ ಅರವತ್ತು ಅಭಿನಂದನ ಸಂಭ್ರಮ

ಕರ್ನಾಟಕ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಬೆಂಗಳೂರು ನಗರದ ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಸಹಾಯಕ ಆಡಳಿತ ಅಧಿಕಾರಿಯಾಗಿ ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಕೇಂದ್ರ ಸಂಘದ ಖಜಾಂಚಿಗಳು ಆದ ಆರ್. ಶ್ರೀನಿವಾಸ್‌ರವರ 60ರ ಸಂಭ್ರಮಾಚರಣೆಯನ್ನು ಇದೆ ಅಕ್ಟೋಬರ್ 26 ಗುರುವಾರ ಸಂಜೆ 4:30 ರಿಂದ ನಗರದ ಜೆಸಿ ರಸ್ತೆಯಲ್ಲಿರುವ ರವೀಂದ್ರ ಕಲಾಕ್ಷೇತ್ರದಲ್ಲಿ ಹಂಸ ಜ್ಯೋತಿ ಟ್ರಸ್ಟ್ ಮತ್ತು ಆರ್ ಶ್ರೀನಿವಾಸ್ ಅಭಿನಂದನ ಸಮಿತಿಯ ವತಿಯಿಂದ ಆಯೋಜಿಸಲಾಗಿದೆ.

39 ವರ್ಷಗಳ ದೀರ್ಘಕಾಲಿಕ ಸಾರ್ಥಕ ಸೇವೆ ಸಲ್ಲಿಸಿ ಇದೀಗ ನಿವೃತ್ತರಾಗುತ್ತಿರುವ ಸುಸಂದರ್ಭದಲ್ಲಿ ಶ್ರೀಯುತರನ್ನು ಅಭಿನಂದಿಸಲು ಹಿತೈಷಿ ಮಿತ್ರರು ಸೇರಿ ಅರ್ಥಪೂರ್ಣ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದಾರೆ. ಸಾಮಾಜಿಕ-ಧಾರ್ಮಿಕ-ಶೈಕ್ಷಣಿಕ ಅನೇಕ ಉತ್ತಮ ಕಾರ್ಯಕ್ರಮಗಳನ್ನು ರೂಪಿಸಿ ಯಶಸ್ವಿ ವ್ಯಕ್ತಿಯಾಗಿ ಸಾಧನೆ ಮಾಡಿರುವ ಶ್ರೀನಿವಾಸ್ ರಂಗಭೂಮಿ ಕಲಾವಿದರು ಹಾಗೂ ಕ್ರೀಡಾಪಟುವು ಸಹ ಆಗಿದ್ದಾರೆ.

ಅಭಿನಂದನಾ ಸಮಾರಂಭದ ಆರಂಭದಲ್ಲಿ ಹಿರಿಯ ರಂಗಭೂಮಿ ಕಲಾವಿದ ಎಂ.ಮುರಳಿಧರ ಪ್ರಧಾನ ನಿರ್ವಹಣೆ ಪರಿಕಲ್ಪನೆಯಲ್ಲಿ ವೈವಿಧ್ಯಮಯ ಗೀತಲಹರಿಯನ್ನು ಗಾಯಕರಾದ ರವೀಂದ್ರ ಸೊರಗಾವಿ, ದಿವಾಕರ ಕಶ್ಯಪ್, ಸವಿತಾ ಗಣೇಶ್ ಪ್ರಸಾದ್ ಹಾಗೂ ಚಾಂದಿನಿ ಗರ್ತಿಕೆರೆ ನಡೆಸಿಕೊಡಲಿದ್ದಾರೆ.

ವಿದುಷಿ ರೂಪಶ್ರೀ ಮಧುಸೂದನ್ ನಿರ್ದೇಶನದ ನೃತ್ಯಗಂಗಾ ಪ್ರದರ್ಶನ ಕಲಾ ಕೇಂದ್ರದವ ರಿಂದ ವೈವಿಧ್ಯಮಯ ಶಾಸ್ತ್ರೀಯ ನೃತ್ಯ ಲಹರಿ ಹಾಗೂ ಅಂತರಾಷ್ಟ್ರೀಯ ಖ್ಯಾತಿಯ ಡೊಳ್ ಚಂದ್ರು ನೇತೃತ್ವದಲ್ಲಿ ಡೊಳ್ಳು ಪೂಜಾ ಹಾಗೂ ವೀರಭದ್ರ, ಕುಣಿತ, ಜಾನಪದ ನೃತ್ಯ ಲಹರಿ ನಡೆಯಲಿದೆ.

ಶ್ರೀನಿವಾಸ ಸಾಧನೆ ಪರಿಚಯಿಸುವ ಅಭಿನವ ಸವ್ಯಸಾಚಿ ಕಿರುಚಿತ್ರ ಪ್ರದರ್ಶನವನ್ನು ಹಮ್ಮಿಕೊಳ್ಳಲಾಗಿದೆ. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವರಾದ ದಿನೇಶ್ ಗುಂಡೂರಾವ್ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಸಂಸ್ಕೃತಿ ಚಿಂತಕ ಡಾ.ಗುರುರಾಜ ಪೋಶೆಟ್ಟಿಹಳ್ಳಿ ಮತ್ತು ಪತ್ರಕರ್ತ ಮ.ಸ. ನಂಜುಂಡಸ್ವಾಮಿ ಸಂಪಾದಕತ್ವದಲ್ಲಿ ಆರ್. ಶ್ರೀನಿವಾಸ್ ಅರವತ್ತು ಅಭಿನಂದನಾ ಗ್ರಂಥ 'ಕೌಸ್ತುಭ'ವನ್ನು ವಿಧಾನ ಪರಿಷತ್ ಸದಸ್ಯ ಎಂ. ಆರ್. ಸೀತಾರಾಮ್ ಬಿಡುಗಡೆ ಮಾಡುವರು.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಕೇಂದ್ರ ಸಂಘದ ರಾಜ್ಯಾಧ್ಯಕ್ಷರಾದ ಸಿ.ಎಸ್. ಷಡಾಕ್ಷರಿ ಅಭಿನಂದನ ನುಡಿಗಳನ್ನು ಆಡುವರು. ಮುಖ್ಯಮಂತ್ರಿಗಳ ಗೌರವ ವೈದ್ಯಕೀಯ ಸಲಹೆಗಾರ ಡಾ॥ಹೆಚ್. ರವಿಕುಮಾರ್ ಸಮಾರಂಭದ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಸಚಿವ ಹೆಚ್. ಎಂ. ರೇವಣ್ಣ, ತುರುವೇಕೆರೆ ಶಾಸಕ ಎಂ.ಟಿ. ಕೃಷ್ಣಪ್ಪ, ಹಿರಿಯ ಪತ್ರಕರ್ತ ರವೀಂದ್ರ ಭಟ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯದ ಆಯುಕ್ತ ಡಾ.ರಣದೀಪ್ ಮತ್ತು ನಿರ್ದೇಶಕಿ ಡಾ.ಎಂ. ಇಂದುಮತಿ ಕರ್ನಾಟಕ ರಾಜ್ಯ ವೈದ್ಯಾಧಿಕಾರಿಗಳ ಸಂಘದ ಅಧ್ಯಕ್ಷ ಡಾ॥ ವಿವೇಕ ದೊರೈ ಭಾಗವಹಿಸುವರು.

ವಿಶೇಷ ಆಹ್ವಾನಿತರಾಗಿ ಹೆಚ್.ಎನ್. ಶೇಷೇ ಗೌಡ, ಡಾ.ಎಲ್. ಭೈರಪ್ಪ ಬಿ.ಪಿ. ಮಂಜೇಗೌಡ, ಹೆಚ್.ಕೆ. ರಾಮು ಮೊದಲಾದವರು ಉಪಸ್ಥಿತರಿರುವರು.

ಇದೇ ಸಂದರ್ಭದಲ್ಲಿ ಎ. ಪುಟ್ಟಸ್ವಾಮಿ, ಮ.ಸ. ನಂಜುಂಡಸ್ವಾಮಿ, ಪ್ರಕಾಶ್ ಗಿಡ್ಡೆ, ಖಜ ಮೋಹಿದೀನ್ ಮತ್ತು ಸುಗುಣ ಕೃಷ್ಣಪ್ಪರವರಿಗೆ ಗೌರವ ಸನ್ಮಾನ ಏರ್ಪಡಿಸಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

ಕಾರ್ಯಕ್ರಮದ ಪೂರ್ವಭಾವಿ ಪ್ರಚಾರ ಮತ್ತು ಸಮಾರಂಭಕ್ಕೆ ಛಾಯಾಗ್ರಾಹಕರು ಮತ್ತು ವರದಿಗಾರರನ್ನು ಕಳುಹಿಸಿಕೊಡಲು ಸವಿನಯ ಮನವಿ




## ವರ್ಷವಿಡೀ ಕಾಡಲಿದೆ ವೈರಲ್ ಸೋಂಕು : ವೈದ್ಯರ ಹೇಳಿಕೆ

ಹವಾಮಾನ ಬದಲಾದಂತೆ ಜನರಲ್ಲಿ ವೈರಲ್ ಸೋಂಕುಗಳು ಹೆಚ್ಚಾಗುತ್ತಿದ್ದು, ಈ ಸೋಂಕು ವರ್ಷವಿಡೀ ಕಾಡಲಿದೆ ಎಂದು ವೈದ್ಯರು ಹೇಳಿದ್ದಾರೆ.

ವೈರಲ್ ಜ್ವರ, ಆರ್‌ಎಸ್‌ವಿ ಸೋಂಕು, ಡೆಂಗ್ಯೂ, ಚಿಕೂನ್‌ಗುನ್ಯಾ, ಕಾಂಜಂಕ್ಟಿವಿಟಿಸ್, ಮಲೇರಿಯಾ ಮತ್ತು ಹೊಟ್ಟೆಯ ಸೋಂಕುಗಳಂತಹ ಇತರ ವೈರಲ್ ರೋಗಗಳು ವರ್ಷವಿಡೀ ಕಾಡಲಿದೆ.



ಸಕ್ರಾ ವರ್ಲ್ಡ್ ಆಸ್ಪತ್ರೆಯ ಹಿರಿಯ ಸಲಹೆಗಾರ ಮತ್ತು ವಿಭಾಗದ ಮುಖ್ಯಸ್ಥ (ಪೀಡಿಯಾಟ್ರಿಕ್ಸ್ ಮತ್ತು ನಿಯೋನಾಟಾಲಜಿ) ಡಾ. ರಜತ್ ಆತ್ರೇಯ ಅವರು ಮಾತನಾಡಿ, ವೈರಲ್ ಸೋಂಕಿನಿಂದ ಹಲವು ರೋಗಿಗಳು ಬಳಲುತ್ತಿದ್ದು, ಆಸ್ಪತ್ರೆಯ ಹೊರರೋಗಿ ವಿಭಾಗಕ್ಕೆ ಪ್ರತಿನಿತ್ಯ 20 ಮಂದಿ ಬರುತ್ತಿರುತ್ತಾರೆ. ಈ ಪೈಕಿ ಓರ್ವರಿಗೆ ಆಸ್ಪತ್ರೆಗೆ ದಾಖಲಾಗುವ ಅಗತ್ಯವಾಗಿರುತ್ತಿದೆ. ಸೋಂಕಿಗೆ ಒಳಗಾದವರು, ಕೆಮ್ಮು, ಗಂಟಲು ನೋವು, ಜ್ವರ, ದೇಹದ ನೋವು ಮತ್ತು ತಲೆನೋವಿನಂತಹ ರೋಗಲಕ್ಷಣಗಳನ್ನು ಹೊಂದಿರುತ್ತಾರೆ. ಈ ಸೋಂಕು ಮೂರು-ಏಳು ದಿನಗಳವರೆಗೆ ಇರುತ್ತದೆ ಎಂದು ಹೇಳಿದ್ದಾರೆ.

ಕೋವಿಡ್ ವೇಳೆ ಹಲವು ವೈರಲ್ ಸೋಂಕುಗಳು ಕಾಣಿಸಿಕೊಳ್ಳಲಾರಂಭಿಸಿದ್ದವು. ಲಾಕ್ ಡೌನ್ ಕಾರಣಗಳಿಂದಾಗಿ ಜನರಲ್ಲಿ ಹೆಚ್ಚಿ ಕಾಣಿಸಿಕೊಂಡಿರಲಿಲ್ಲ. ಇದೀಗ ಹವಾಮಾನ ಬದಲಾದಂತೆ ಜನರನ್ನು ಕಾಡಲು ಆರಂಭಿಸಿದೆ. ವೈರಲ್‌ಗಳು ರೂಪಾಂತರಗಳು ಫ್ಲೂ ಪ್ರಕರಣಗಳಿಗೆ ಕಾರಣವಾಗುತ್ತದೆ ಎಂದು ತಿಳಿಸಿದ್ದಾರೆ.

ಜೂನ್ ತಿಂಗಳಿನಲ್ಲಿ ಮಳೆಗಾಲ ಆರಂಭವಾದ ಹಿನ್ನೆಲೆಯಲ್ಲಿ ನಗರದಲ್ಲಿ ಡೆಂಗ್ಯೂ, ಆರ್‌ಎಸ್‌ವಿ ಸೋಂಕುಗಳು, ನ್ಯೂಮೋನಿಯಾ, ಕಾಂಜಂಕ್ಟಿವಿಟಿಸ್ ಮತ್ತು ಗ್ಯಾಸ್ಟ್ರೋಎಂಟರೈಟಿಸ್ ಪ್ರಕರಣಗಳು ಹೆಚ್ಚಾಗಿದ್ದವು.

ಕೋವಿಡ್ ಆತಂಕ ದೂರಾಗಿರುವ ಹಿನ್ನೆಲೆಯಲ್ಲಿ ಜನರು ಮಾಸ್ಕ್ ಧರಿಸುವುದನ್ನು ಹಾಗೂ ಕೋವಿಡ್ ಸೂಕ್ತ ನಡವಳಿಕೆಯನ್ನು ಅನುಸರಿಸುವುದನ್ನು ನಿಲ್ಲಿಸಿದ್ದು, ಈ ಹಿನ್ನೆಲೆಯಲ್ಲಿ ವೈರಲ್ ಸೋಂಕುಗಳು ಜನರನ್ನು ಕಾಡಲು ಆರಂಭಿಸಿದೆ.


## ಚಂದನವನದಲ್ಲಿ ಬರ್ತಿದೆ ಮಲೆನಾಡ ಸೊಗಡಿನ ಸಿನಿಮಾ 'ಕೆರೆಬೇಟೆ' : ಗೌರಿ ಶಂಕರ್ ನಾಯಕ



ಐದು ವರ್ಷಗಳ ವಿರಾಮದ ನಂತರ ನಟ ಗೌರಿ ಶಂಕರ್ ಅವರು ರಾಜ್ ಗುರು ನಿರ್ದೇಶನದ 'ಕೆರೆಬೇಟೆ' ಚಿತ್ರದ ಮೂಲಕ ಸ್ಯಾಂಡಲ್‌ವುಡ್‌ಗೆ ಮರಳುತ್ತಿದ್ದಾರೆ. ಚಿತ್ರವನ್ನು ಮಲೆನಾಡಿನ ಸುಂದರವಾದ ಸ್ಥಳದಲ್ಲಿ ಚಿತ್ರೀಕರಿಸಲಾಗಿದೆ. ಇದುವೇ ಚಿತ್ರವನ್ನು ವಿಭಿನ್ನ ಮತ್ತು ವಿಶೇಷವಾಗಿಸಿದೆ. ಮಲೆನಾಡು ತನ್ನ ಸಾಂಪ್ರದಾಯಿಕ ಮೀನುಗಾರಿಕೆ ಅಭ್ಯಾಸಗಳಿಗೆ ಹೆಸರುವಾಸಿಯಾಗಿದ್ದು, ಇದುವೇ ಚಿತ್ರಕ್ಕೆ ತಿರುವು ನೀಡುತ್ತದೆ.

ಶೀರ್ಷಿಕೆ ಪೋಸ್ಟರ್ ಮೂಲಕ ಚಿತ್ರತಂಡ ಬಹಿರಂಗಪಡಿಸಿದಂತೆ ಸಿನಿಮಾ ಹಳೆಯ ಮೀನುಗಾರಿಕೆ ವಿಧಾನಗಳ ಮೇಲೆ ಕೇಂದ್ರೀಕರಿಸುವ ಗ್ರಾಮೀಣ ಭಾಗದಲ್ಲಿ ನಡೆಯುವ ಕಥಾಹಂದರವನ್ನು ಹೊಂದಿದೆ ಎಂಬುದನ್ನು ತಿಳಿಸುತ್ತದೆ.

ಸಂಪೂರ್ಣ ಶಿವಮೊಗ್ಗದಲ್ಲಿ ಚಿತ್ರೀಕರಣಗೊಂಡಿರುವ ಈ ಚಿತ್ರ ಮುಂದಿನ ವರ್ಷದ ಆರಂಭದಲ್ಲಿ ತೆರೆಗೆ ಬರಲಿದೆ. ಈ ಯೋಜನೆ ಮೂಲಕ ನಟ ಗೌರಿ ಶಂಕರ್ ಅವರು ಜೈ ಶಂಕರ್ ಪಟೇಲ್ ಜೊತೆಗೂಡಿ ನಿರ್ಮಾಪಕರಾಗಿಯೂ ಜವಾಬ್ದಾರಿಯನ್ನು ಹೊತ್ತಿದ್ದಾರೆ. ಕೆರೆಬೇಟೆಗೆ ಗಗನ್ ಬದರಿಯಾ ಸಂಗೀತ ನೀಡಿದ್ದಾರೆ.



# ಚಾಮುಂಡೇಶ್ವರಿಯ ಕೃಪೆಯಿಂದ ರೈತರು ನೆಮ್ಮದಿಯಿಂದ ಬದುಕುವ ವಾತಾವರಣ ನಿರ್ಮಾಣವಾಗಲಿ

**■ ಶಾಸಕ ಬಿ.ವೈ.ವಿಜಯೇಂದ್ರ ಆಶಯ**



**ನಾವಿಕ, ಶಿಕಾರಿಪುರ, ಅ.25:-**

ಯಡಿಯೂರಪ್ಪನವರನ್ನು 9 ಬಾರಿ ಶಾಸಕರಾಗಿಸಿದ ಕ್ಷೇತ್ರದ ಜನತೆಯ ಋಣ ತೀರಿಸಲು ತಾಲೂಕು ಸಮಗ್ರ ಅಭಿವೃದ್ಧಿಗೊಳಿಸಲಾಗಿದ್ದು, ಬರಗಾಲದಲ್ಲಿ ರೈತರಿಗೆ ನೀರಿನ ಸಮಸ್ಯೆ ತಲೆದೋರದಂತೆ ಕೆರೆಗಳಿಗೆ ನೀರು ತುಂಬಿಸುವ ಕನಸು ನನಸಾಗಿದೆ. ವಿದ್ಯುತ್ ಅಭಾವದಿಂದ ಕೆಲ ಕೆರೆಗಳಿಗೆ ನೀರು ತುಂಬಿಸಲು ಅಸಾಧ್ಯವಾಗಿದ್ದು, ಶೀಘ್ರದಲ್ಲಿಯೇ ಜಗನ್ಮಾತೆ ಚಾಮುಂಡೇಶ್ವರಿಯ ಕೃಪೆಯಿಂದ ರೈತರು ನೆಮ್ಮದಿಯಿಂದ ಬದುಕುವ ವಾತಾವರಣ ನಿರ್ಮಾಣವಾಗಲಿ ಎಂದು ಪ್ರಾರ್ಥಿಸುವುದಾಗಿ ಕ್ಷೇತ್ರದ ಶಾಸಕ ಬಿ.ವೈ. ವಿಜಯೇಂದ್ರ ತಿಳಿಸಿದರು.

ಮಂಗಳವಾರ ತಾಲೂಕು ಆಡಳಿತ, ಗ್ರಾ.ಪಂ. ಬೇಗೂರು, ವಿವಿಧ ದೇವಸ್ಥಾನ ಉಸ್ತುವಾರಿ ಸಮಿತಿ ವತಿಯಿಂದ ತಾಲೂಕಿನ ಬೇಗೂರು ಮರಡಿ ತಾಂಡಾದ ಶ್ರೀ ಗಾಳಿ ಆಂಜನೇಯ ದೇವಸ್ಥಾನ ಮುಂಭಾಗದಲ್ಲಿನ ಬನ್ನಿ ಮಂಟಪದಲ್ಲಿ ದಸರಾ ಮಹೋತ್ಸವದ ಅಂಗವಾಗಿ ನಡೆದ ಬನ್ನಿ ಮುಡಿಯುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ದೇಶಾದ್ಯಂತ ಬಹು ವಿಜೃಂಭಣೆಯಿಂದ ದಸರಾ ಹಬ್ಬವನ್ನು ಆಚರಿಸಲಾಗಿದ್ದು,ಅಸತ್ಯದ ವಿರುದ್ದ ಸತ್ಯದ ವಿಜಯ, ಅಧರ್ಮದ ವಿರುದ್ದ ಧರ್ಮದ ಜಯ ದಸರಾ ಹಬ್ಬದ ವಿಶೇಷತೆಯಾಗಿದೆ ಎಂದ ಅವರು, ಸತತ 10 ದಿನಗಳ ಕಾಲ ನಡೆದ ಯುದ್ದದಲ್ಲಿ ಮಹಿಷಾಸುರನನ್ನು ಜಗನ್ಮಾತೆ ದುರ್ಗಾದೇವಿ ಸಂಹರಿಸಿದ್ದು, ಇದರೊಂದಿಗೆ ಶ್ರೀರಾಮ ಯುದ್ದದಲ್ಲಿ ರಾವಣನನ್ನು ಸಂಹರಿಸಿ ಸೀತೆಯನ್ನು ಕಾಪಾಡಿದ್ದು ದಸರಾ ಮಹೋತ್ಸವಕ್ಕೆ ಸಾಕ್ಷಿಯಾಗಿದೆ ಎಂದರು.

ಉತ್ತರ ಭಾರತದಲ್ಲಿ ದುರ್ಗಾ ಮಾತೆಯನ್ನು ವಿವಿಧ ರೂಪದಲ್ಲಿ ಪೂಜಿಸುವ ಸಂಪ್ರದಾಯ ಚಾಲ್ತಿಯಲ್ಲಿದ್ದು, ಕನ್ನಡ ನಾಡಿನಲ್ಲಿ ತಾಯಿ ಚಾಮುಂಡೇಶ್ವರಿಯನ್ನು ಶ್ರದ್ದೆ, ಭಕ್ತಿಯಿಂದ ಪೂಜಿಸಲಾಗುತ್ತದೆ. ಇಂತಹ ಶ್ರೇಷ್ಟ ಸಂಸ್ಕೃತಿಯ ಪರಂಪರೆಯನ್ನು ಉಳಿಸಿ ಮುಂದಿನ ಪೀಳಿಗೆಗೆ ಹಬ್ಬದ ಪ್ರಾಮುಖ್ಯತೆ, ಆಚರಣೆಯನ್ನು ತಿಳಿಸಬೇಕಾಗಿದೆ ಎಂದ ಅವರು, ಈ ದಿಸೆಯಲ್ಲಿ ಯಡಿಯೂರಪ್ಪನವರು ಮುಖ್ಯ ಮಂತ್ರಿಯಾದ ಅವಧಿಯಲ್ಲಿ ರೂ.2.25 ಕೋಟಿ ವೆಚ್ಚದಲ್ಲಿ ಬನ್ನಿ ಮಂಟಪ ನಿರ್ಮಿಸಿ ಪ್ರತಿ ವರ್ಷ ಭಕ್ತಿ ಶ್ರದ್ದೆಯಿಂದ ತಾಲೂಕಿನ ಲಕ್ಷಾಂತರ ಜನತೆ ಆಗಮಿಸಿ ಕಣ್ತುಂಬಿಕೊಳ್ಳಲು ಎಲ್ಲ ವ್ಯವಸ್ಥೆ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ರಾಜ್ಯಾದ್ಯಂತ ಭೀಕರ ಬರಗಾಲದಿಂದ ರೈತರು ತತ್ತರಿಸಿದ್ದು, ತಾಲೂಕಿನಲ್ಲಿ ಸಮಯಕ್ಕೆ ಸರಿಯಾಗಿ ಮಳೆಯಾಗಿ ರೈತರು ನೆಮ್ಮದಿ, ಸ್ವಾಭಿಮಾನದಿಂದ ಬದುಕುವಂತೆ ದೇವಿ ಚಾಮುಂಡಿಯಲ್ಲಿ ಪ್ರಾರ್ಥಿಸುವುದಾಗಿ ತಿಳಿಸಿದ ಅವರು, ಯಡಿಯೂರಪ್ಪನವರನ್ನು 9 ಬಾರಿ ಶಾಸಕರಾಗಿಸಿದ ಕ್ಷೇತ್ರದ ಜನತೆಯ ಋಣ ತೀರಿಸಲು ಸರ್ವಾಂಗೀಣ ಅಭಿವೃದ್ಧಿಯ ಜೊತೆಗೆ ಬರಗಾಲದಲ್ಲಿಯೂ ರೈತರಿಗೆ, ಜನಜಾನುವಾರುಗಳಿಗೆ ಕುಡಿಯುವ ನೀರಿಗೆ ತೊಂದರೆ ಆಗದಂತೆ ಕೆರೆಗಳಿಗೆ ನೀರು ತುಂಬಿಸುವ ಯಡಿಯೂರಪ್ಪನವರ ಕನಸು ನನಸಾಗಿದೆ. ಅಂಜನಾಪುರ ಜಲಾಶಯಕ್ಕೆ ತುಂಗೆಯ ನೀರು ಹರಿಸಲಾಗಿದ್ದು, ಎಲ್ಲಾ ಕೆರೆಗಳಿಗೆ ಪೈಪ್ಲೈನ್ ಮೂಲಕ ನೀರು ಹರಿಸಲಾಗುತ್ತಿದೆ ಎಂದು ತಿಳಿಸಿದರು.

ಈಗಾಗಲೇ 150ಕ್ಕೂ ಹೆಚ್ಚು ಕೆರೆಗಳಿಗೆ ನೀರು ಹರಿಸಲಾಗಿದ್ದು, 40 ರಿಂದ 45 ಕೆರೆಗಳಿಗೆ ಶೇ.50 ನೀರು ಹರಿಸಲಾಗಿದೆ. ವಿದ್ಯುತ್ ಅಭಾವದಿಂದಾಗಿ ಉಳಿದ ಕೆರೆಗಳಿಗೆ ನೀರು ತುಂಬಿಸಲು ಸಾಧ್ಯವಾಗಿಲ್ಲ. ಶೀಘ್ರದಲ್ಲಿಯೇ ಎಲ್ಲಾ ಕೆರೆಗಳಿಗೆ ನೀರು ತುಂಬಿಸಲಾಗುವುದು. ರೈತ ನೆಮ್ಮದಿಯಿಂದ ಬದುಕುವ ಸುದಿನ ಬರಲಿದೆ ಎಂದು ತಿಳಿಸಿದರು.

ತಹಸೀಲ್ದಾರ್ ಮಲ್ಲೇಶ್ ಬೀರಪ್ಪ ಪೂಜಾರ್ ಮಾತನಾಡಿ, ವಿಜಯದಶಮಿ ವಿಜಯದ ಸಂಕೇತವಾಗಿದ್ದು, ಉ.ಭಾರತದಲ್ಲಿ ರಾವಣನನ್ನು ಶ್ರೀ ರಾಮ ಸಂಹರಿಸಿ ವಾಪಾಸು ನಾಡಿಗೆ ಮರಳಿದ ದಿನವಾಗಿ ಆಚರಿಸುವ ಸಂಪ್ರದಾಯವಿದ್ದು, ರಾಜ್ಯದಲ್ಲಿ ಮಹಿಷಾಸುರನನ್ನು ಚಾಮುಂಡೇಶ್ವರಿ ಸಂಹರಿಸಿದ ದಿನ ಎಂಬ ಪ್ರತೀತಿಯಿಂದ ಹಬ್ಬವನ್ನು ಸಡಗರದಿಂದ ಆಚರಿಸಲಾಗುತ್ತದೆ ಎಂದು ತಿಳಿಸಿ ಸರ್ಕಾರದ ಆದೇಶದ ಮೇರೆಗೆ ವಿಜಯದಶಮಿಯಂದ ಕಂದಾಯ ಇಲಾಖೆಯಿಂದ ಜಮಾಬಂಧಿ ಕಾರ್ಯಕ್ರಮ ನಡೆಯಲಿದ್ದು ಕಂದಾಯ ಸಂಗ್ರಹಣೆ, ಅಭಿವೃದ್ಧಿ ಪರಿಶೀಲನೆ ಮೂಲಕ ಇಲಾಖೆ ಪ್ರಗತಿ ಕಾರ್ಯ ನಡೆಸಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಬನ್ನಿ ಮಂಟಪಕ್ಕೆ ವಿವಿಧ ವಾದ್ಯಗೋಷ್ಠಿಯೊಂದಿಗೆ ಅಲಂಕೃತ ಪಲ್ಲಕ್ಕಿಯಲ್ಲಿ ಆಗಮಿಸಿದ ಪಟ್ಟಣದ ಶ್ರೀ ಹುಚ್ಚುರಾಯ ಸ್ವಾಮಿ, ಶ್ರೀ ಸಿರ್ಸಿ ಮಾರಮ್ಮ, ಗಿಡ್ಡಯ್ಯಸ್ವಾಮಿ, ಹುಲಿಕಟ್ಟೆಪ್ಪಸ್ವಾಮಿ, ಬೇಗೂರಿನ ಆಂಜನೇಯ ಸ್ವಾಮಿ, ಆಪಿನಕಟ್ಟೆಯ ಕೊನೆ ಬಸವೇಶ್ವರ, ಬೆಂಡೆಕಟ್ಟೆಯ ಬಸವೇಶ್ವರಸ್ವಾಮಿ, ಬಾಳೇಕೊಪ್ಪದ ಹನುಮಂತ ದೇವರಿಗೆ ಮಹಾಮಂಗಳಾರತಿ ನಂತರದಲ್ಲಿ ತಹಸೀಲ್ದಾರ್ ಮಲ್ಲೇಶಪ್ಪ ಪೂಜಾರ್ ಅಂಬುಚ್ಛೇದಗೊಳಿಸಿ 9 ದಿನಗಳ ಸಾಂಪ್ರಾದಾಯಿಕ ದಸರಾ ಮಹೋತ್ಸವ ಸಂಪನ್ನಗೊಳಿಸಿದರು. ಅಧ್ಯಕ್ಷತೆಯನ್ನು ಗ್ರಾ.ಪಂ. ಅಧ್ಯಕ್ಷೆ ಲಲಿತಾಬಾಯಿ ವಹಿಸಿದ್ದರು. ಗೋಕಾಕ್ ಆದಿಗುರು ಶಂಕರಾಚಾರಿ ಮಠದ ಶ್ರೀ ದಯಾನಂದ ಸ್ವಾಮೀಜಿ ಸಾನಿಧ್ಯ ವಹಿಸಿ ಆಶೀರ್ವದಿಸಿದರು.

ಮುಖಂಡ ನಾಗರಾಜ ಗೌಡ, ಗುರುಮೂರ್ತಿ,ಬಿ.ವಿ. ಮಂಜುನಾಥ್, ಎಚ್.ಟಿ.ಬಳಿಗಾರ್ ಗ್ರಾ.ಪಂ. ಉಪಾಧ್ಯಕ್ಷ ಅರುಣಕುಮಾರ್, ಸದಸ್ಯೆ ನೇತ್ರಾವತಿ, ಗಂಗಾಧರ, ಕುಮಾರನಾಯ್ಕ, ರೂಪ, ಲಕ್ಷ್ಮಣ ರಾವ್ ಸಹಿತ ಸಹಸ್ರಾರು ಭಕ್ತರು ಶ್ರದ್ದೆಭಕ್ತಿಯಿಂದ ಆಗಮಿಸಿ ಕಾರ್ಯಕ್ರಮಕ್ಕೆ ಸಾಕ್ಷಿಯಾದರು.

# ರೋಗಿಗಳ ಆರೈಕೆ ಮಾಡುತ್ತಿರುವ ಶರಣ್ಯ ಕಾರ್ಯ ಶ್ಲಾಘನೀಯ



**ನಾವಿಕ, ಶಿವಮೊಗ್ಗ ಅ.25:-**

ಆರೋಗ್ಯ ಸಮಸ್ಯೆಯಿಂದ ಬಳಲುತ್ತಿರುವ ರೋಗಿಗಳ ಸೇವೆ ಮಾಡುವ ಜೊತೆಯಲ್ಲಿ ಅಗತ್ಯ ಸೌಕರ್ಯಗಳನ್ನು ಒದಗಿಸುತ್ತಿರುವ ಶರಣ್ಯ ಸಂಸ್ಥೆಯ ಕಾರ್ಯ ಶ್ಲಾಘನೀಯ ಎಂದು ಜಿಲ್ಲಾಧಿಕಾರಿ ಡಾ. ಆರ್.ಸೆಲ್ವಮಣಿ ಹೇಳಿದರು.

ಶಿವಮೊಗ್ಗ ತಾಲೂಕಿನ ಗಾಜನೂರು ಅಗ್ರಹಾರದಲ್ಲಿರುವ ಡಿಎಸ್‌ಎಲ್ ಟ್ರಸ್ಟ್‌ನ ಶರಣ್ಯ ಆರೈಕೆ ಕೇಂದ್ರದ ವತಿಯಿಂದ ಆಯೋಜಿಸಿದ್ದ ಶ್ರೀ ಮಾತೆ ಚೌಡೇಶ್ವರಿ ಮತ್ತು ಶ್ರೀ ಭೂತೇಶ್ವರ ದೇವರುಗಳ ನವೀಕೃತ ದೇಗುಲದ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿ, ಮಾನವೀಯ ನೆಲೆಯಲ್ಲಿ ಶರಣ್ಯ ಸಂಸ್ಥೆಯು ವಿಶೇಷ ಕಾರ್ಯ ನಡೆಸುವ ಮೂಲಕ ಸಮಾಜಕ್ಕೆ ಉತ್ತಮ ಸಂದೇಶ ನೀಡುತ್ತಿದೆ ಎಂದು ತಿಳಿಸಿದರು.

ಜಿಲ್ಲಾ ಪೊಲೀಸ್ ರಕ್ಷಣಾಧಿಕಾರಿ ಜಿ.ಕೆ.ಮಿಥುನ್‌ಕುಮಾರ್ ಮಾತನಾಡಿ, ಶರಣ್ಯ ಸಂಸ್ಥೆಯು ಸಮಾಜಮುಖಿಯಾಗಿ ಕೆಲಸ ಮಾಡುತ್ತಿದ್ದು, ರೋಗಿಗಳ ಆರೈಕೆಯಲ್ಲಿ ವಿಶೇಷ ಕಾಳಜಿ ವಹಿಸುತ್ತಿದೆ. ರೋಗಿಗಳ ಕಷ್ಟದ ದಿನಗಳಲ್ಲಿ ಅವರಿಗೆ ಉಚಿತ ಸೇವೆ ಮಾಡುತ್ತಿರುವುದು ಅಭಿನಂದನೀಯ ಕಾರ್ಯ ಎಂದು ತಿಳಿಸಿದರು.

ಶರಣ್ಯ ಆರೈಕೆ ಕೇಂದ್ರದ ಆವರಣದಲ್ಲಿ ಇರುವ ಶ್ರೀ ಮಾತೆ ಚೌಡೇಶ್ವರಿ ಮತ್ತು ಶ್ರೀ ಭೂತೇಶ್ವರ ದೇವರುಗಳ ನವೀಕೃತ ದೇಗುಲದ ಲೋಕಾರ್ಪಣೆ ಸಂದರ್ಭದ ಪ್ರಯುಕ್ತ ದುರ್ಗಾ ಹೋಮ ನಡೆಸಲಾಯಿತು. ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಡಾ. ಆರ್.ಸೆಲ್ವಮಣಿ, ಎಸ್.ಪಿ. ಜಿ.ಕೆ.ಮಿಥುನ್‌ಕುಮಾರ್ ಅವರು ವಾರ್ಡ್‌ಗಳಿಗೆ ಭೇಟಿ ನೀಡಿ ವೀಕ್ಷಿಸಿದರು. ವೀಡಿಯೋ ಮುಖಾಂತರ ಸಂಸ್ಥೆಯ ವಿವರ ವೀಕ್ಷಿಸಿದರು. ಎರಡು ಬಿಲ್ವಪತ್ರೆಯ ಗಿಡಗಳನ್ನು ಆವರಣದಲ್ಲಿ ನೆಡಲಾಯಿತು.

ಶರಣ್ಯ ಸಂಸ್ಥೆಯ ಗೌರವಾಧ್ಯಕ್ಷ, ವಿಧಾನ ಪರಿಷತ್ ಮಾಜಿ ಸಭಾಪತಿ ಡಿ.ಎಚ್.ಶಂಕರಮೂರ್ತಿ, ಡಿ.ಎಸ್.ಅರುಣ್, ಶರಣ್ಯ ಸಂಸ್ಥೆ ಅಧ್ಯಕ್ಷ ಟಿ.ಆರ್.ಅಶ್ವತ್ಥ್‌ನಾರಾಯಣ ಶೆಟ್ಟಿ, ಮ್ಯಾನೇಜಿಂಗ್ ಟ್ರಸ್ಟಿ ಡಿ.ಎಲ್.ಮಂಜುನಾಥ್, ಸಹ ಕಾರ್ಯದರ್ಶಿ ಬಿ.ಎನ್.ಮಂಜುನಾಥ್, ಸಂದೀಪ್, ಶ್ವೇತಾ ಮತ್ತಿತರರು ಉಪಸ್ಥಿತರಿದ್ದರು.

# ನಾಯಕತ್ವ ಗುಣ ಬೆಳೆಸುವಲ್ಲಿ ಸ್ಕೌಟ್ಸ್ ಸಹಕಾರಿ

**ನಾವಿಕ, ಶಿವಮೊಗ್ಗ ಅ.25:-**

ಸ್ಕೌಟ್ಸ್ ಮತ್ತು ಗೈಡ್ಸ್‌ನಲ್ಲಿ ಪಾಲ್ಗೊಳ್ಳುವ ವಿದ್ಯಾರ್ಥಿಗಳು ಸಮಾಜಮುಖಿ ಸೇವಾ ಮನೋಭಾವ ಬೆಳೆಸಿಕೊಂಡು ದೇಶದ ಸದೃಢ ಬೆಳವಣಿಗೆಯಲ್ಲಿ ಮಹತ್ತರ ಪಾತ್ರ ವಹಿಸಬೇಕು ಎಂದು ಶಿವಮೊಗ್ಗ ಕ್ಷೇತ್ರ ಶಿಕ್ಷಣಾಧಿಕಾರಿ ಪಿ. ನಾಗರಾಜ್ ಹೇಳಿದರು.



ಶಿವಮೊಗ್ಗ ಜಿಲ್ಲಾ ಸ್ಕೌಟ್ ಭವನದಲ್ಲಿ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಶಿವಮೊಗ್ಗ ಜಿಲ್ಲಾ ಮತ್ತು ಸ್ಥಳೀಯ ಸಂಸ್ಥೆ ಹಾಗೂ ಮಲ್ನಾಡ್ ಓಪನ್ ಗ್ರೂಪ್ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಜಂಬೂರೀ ಆನ್ ದಿ ಏರ್ ( ಜೋಟ) ಮತ್ತು ಜಂಬೂರೀ ಆನ್ ದಿ ಇಂಟರ್ನೆಟ್ (ಜೋಟಿ) ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಸ್ಕೌಟ್ಸ್ ಮತ್ತು ಗೈಡ್ಸ್‌ನಲ್ಲಿ ವಿದ್ಯಾರ್ಥಿಗಳು ತೊಡಗಿಸಿಕೊಳ್ಳುವಂತೆ ಪೋಷಕರು ಹಾಗೂ ಶಿಕ್ಷಕರು ಪ್ರೇರೇಪಿಸಬೇಕು. ಉತ್ತಮ ವ್ಯಕ್ತಿತ್ವ, ನಾಯಕತ್ವಗುಣ ಸೇರಿದಂತೆ ಸಮಾಜದ ಪ್ರಗತಿಗೆ ಕಾರಣ ಆಗುತ್ತಾರೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಆಯುಕ್ತ (ಸ್ಕೌಟ್) ಕೆ.ಪಿ.ಬಿಂದುಕುಮಾರ್ ಮಾತನಾಡಿ, ಸಂವಹನ ಕ್ಷೇತ್ರದಲ್ಲಿ ತಾಂತ್ರಿಕ ಪರಿಣಿತಿ, ಇತರ ಹ್ಯಾಮ್ ರೇಡಿಯೋ ಆಪರೇಟರ್ಸ್‌ಗಳೊಂದಿಗೆ ಚರ್ಚೆ, ಆಂಟೆನ್ನಾ ಅಭಿವೃದ್ಧಿ, ಉಪಗ್ರಹದ ಮೂಲಕ ಸಂವಹನ, ವಿಕೋಪಗಳಲ್ಲಿ ಸೇವೆ ಮುಂತಾದ ಉತ್ತಮ ಅಂಶ ಒಳಗೊಂಡ ಹ್ಯಾಮ್ ರೇಡಿಯೋದ ಸದಸ್ಯರಾಗಬೇಕು ಎಂದರು.

ಅಂತರ ರಾಷ್ಟ್ರೀಯ ಸ್ಕೌಟ್ ಗೈಡ್ ಸಂಸ್ಥೆ 60 ವರ್ಷಕ್ಕೂ ಮೇಲ್ಪಟ್ಟು ಆಚರಿಸುತ್ತಿರುವ ಚಟುವಟಿಕೆಯಲ್ಲಿ ಸಕ್ರಿಯವಾಗಿ ಭಾಗವಹಿಸಿ ದೇಶದ ಇತರ ಜಾಗದಲ್ಲಿ ಹಾಗೂ ವಿದೇಶದ ಸ್ಕೌಟ್ಸ್ ಮತ್ತು ಗೈಡ್ಸ್ ಮಕ್ಕಳೊಂದಿಗೆ ಉತ್ತಮ ಸಂವಹನ ಮಾಡಬೇಕು ಎಂದು ತಿಳಿಸಿದರು.

ಹ್ಯಾಮ್ ರೇಡಿಯೋ ಆಪರೇಟರ್ ಹಾಗೂ ಸ್ಥಳೀಯ ಸಂಸ್ಥೆ ಕಾರ್ಯದರ್ಶಿ ರಾಜೇಶ್ ವಿ. ಅವಲಕ್ಕಿ ಪ್ರಾಸ್ತಾವಿಕ ಮಾತನಾಡಿ, ಹ್ಯಾಮ್ ರೇಡಿಯೋದ ಬಗ್ಗೆ, ಅಂತರಾಷ್ಟ್ರೀಯ ಮಟ್ಟದಲ್ಲಿ ನಡೆಯುವ ಜೋಟ ಮತ್ತು ಜೋಟಿ ಬಗ್ಗೆ ಮಾಹಿತಿ ನೀಡಿದರು.

ಜಿಲ್ಲಾ ಮುಖ್ಯ ಆಯುಕ್ತ ಹೆಚ್.ಡಿ. ರಮೇಶ್ ಶಾಸ್ತ್ರೀ ಬ್ರೆಜಿಲ್ ದೇಶದ ಮಕ್ಕಳೊಂದಿಗೆ ಸಂಪರ್ಕಿಸಿ ಮಾತನಾಡಿದರು. ಸಹ್ಯಾದ್ರಿ ಕಾಲೇಜು, ಮಲೆನಾಡು ಮುಕ್ತದಳ ಮತ್ತು ಇತರ ಶಾಲೆ ಕಾಲೇಜಿನ ಸ್ಕೌಟ್ ಗೈಡ್ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಭಾರತಿ ಡಯಾಸ್ ಸ್ವಾಗತಿಸಿ ನಿರೂಪಿಸಿದರು. ಶ್ರೀನಿವಾಸ್ ವರ್ಮಾ ವಂದಿಸಿದರು.

ಹ್ಯಾಮ್ ಆಪರೇಟರ್ ಮತ್ತು ಸ್ಥಳೀಯ ಸಂಸ್ಥೆಯ ಸಹ ಕಾರ್ಯದರ್ಶಿ ಘನಶ್ಯಾಮ್ ಗಿರಿಮಾಜಿ, ಕೇಂದ್ರ ಸ್ಥಾನಿಕ ಆಯುಕ್ತ ಜಿ.ವಿಜಯ್‌ಕುಮಾರ್, ಮಲ್ಲಿಕಾರ್ಜುನ ಕಾನೂರ್ ಉಪಸ್ಥಿತರಿದ್ದರು.



**ನಾವಿಕ, ಶಿವಮೊಗ್ಗ, ಅ.25:-** ಇನ್ನರ್‌ವ್ಹೀಲ್ ಮಹಿಳಾ ಸಂಘದಿಂದ ಶಾಮ ಧಾಮ ವೃದ್ಧಾಶ್ರಮದಲ್ಲಿ ದಸರಾ ದೀಪ ಸಂಭ್ರಮ ಏರ್ಪಡಿಸಲಾಗಿತ್ತು. ಗೊಂಬೆಗಳ ಜೋಡಣೆ ಗೀತ ಗಾಯನ ಭಜನೆ ಕಾರ್ಯಕ್ರಮಗಳಲ್ಲಿ ಆಶ್ರಮ ವಾಸಿಗಳು ಸಂತೋಷದಿಂದ ಭಾಗವಹಿಸಿದ್ದರು. ಅಧ್ಯಕ್ಷೆ ಎನ್. ಜಿ. ಉಷಾ, ಉಪಾಧ್ಯಕ್ಷ ಗಾಯಿತ್ರಿ, ದೀಪ, ಅನಿತಾ ಜ್ಯೋತಿ ರಮಾ ಗೋಪಾಲ್ ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ವೃದ್ಧಾಶ್ರಮದ ವೆಂಕಟಚಲ ಅವರನ್ನು ಹಾಗೂ ಭಜನಾ ಮಂಡಳಿಯ ಗಾಯಿತ್ರಿ ರಾಜಗೋಪಾಲ್‌ರವರನ್ನು ಸನ್ಮಾನಿಸಲಾಯಿತು.

# ಕಾನೂನು ಮಾಪನಶಾಸ್ತ್ರ ಇಲಾಖೆಯ ಪ್ರಗತಿ

**ನಾವಿಕ, ಶಿವಮೊಗ್ಗ ಅ.25:-** ಶಿವಮೊಗ್ಗ ಜಿಲ್ಲೆಯಲ್ಲಿ 2023-24 ನೇ ಸಾಲಿನಲ್ಲಿ ಏಪ್ರಿಲ್ -2023 ರಿಂದ ಸೆಪ್ಟಂಬರ್-2023 ರವರೆಗೆ ಕಾನೂನು ಮಾಪನಶಾಸ್ತ್ರ ಇಲಾಖೆಯಿಂದ ಸಾಧಿಸಲಾದ ಪ್ರಗತಿಯ ವಿವರವನ್ನು ಇಲಾಖೆಯ ಸಹಾಯಕ ನಿಯಂತ್ರಕರು ಈ ಕೆಳಗಿನಂತೆ ನೀಡಿರುತ್ತಾರೆ.

ತೂಕ, ಅಳತೆ ಸಾಧನಗಳ ಸತ್ಯಾಪನೆ/ಮುದ್ರೆಯಿಂದ ಸಂಗ್ರಹಿಸಿದ ಶುಲ್ಕ ರೂ. 1,03,82,039 ಆಗಿರುತ್ತದೆ. ತಪಾಸಣೆ ಮಾಡಿರುವ ವ್ಯಾಪಾರಸ್ಥರ ಮತ್ತು ಕೈಗಾರಿಕೆಗಳ ಸಂಖ್ಯೆ 1163. ತಪ್ಪಿತಸ್ಥರ ಮೇಲೆ ಹೂಡಿರುವ ಮೊಕದ್ದಮೆಗಳ ಸಂಖ್ಯೆ 311 ಆಗಿರುತ್ತದೆ. ರಾಜಿ ಅಭಿಸಂದಾನ ಮಾಡಿರುವ ಮೊಕದ್ದಮೆಗಳ ಸಂಖ್ಯೆ 309. ಮೊಕದ್ದಮೆಗಳನ್ನು ರಾಜಿ ಅಭಿಸಂಧಾನ ಮಾಡಿ ವಿಧಿಸಿದ ದಂಡ ರೂ.10,19,500 ಆಗಿರುತ್ತದೆ ಎಂದು ಕಾನೂನು ಮಾಪನಶಾಸ್ತ್ರ ಇಲಾಖೆಯ ಸಹಾಯ ನಿಯಂತ್ರಕ ಹೆಚ್.ಎಸ್.ರಾಜು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



**ನಾವಿಕ, ಶಿವಮೊಗ್ಗ, ಅ.25:-** ನಗರದ ಎಟಿಎನ್‌ಸಿಸಿ ಕಾಲೇಜಿನ ಸಭಾಂಗಣದಲ್ಲಿ 'ಸಿಎ ನನ್ನ ಗುರಿ' ಎಂಬ ವಿಚಾರ ಕುರಿತು ಉಪನ್ಯಾಸ ಕಾರ್ಯಕ್ರಮ ಆಯೋಜಿಸಲಾ ಗಿತ್ತು. ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿದ್ದ ಮಂಗಳೂರಿನ ತ್ರಿಶಾ ಸಮುದಾಯ ಸಂಸ್ಥೆಗಳ ಮುಖ್ಯ ಸಚೇತರಾದ ಸಿ.ಎ. ಗೋಪಾಲಕೃಷ್ಣ ಭಟ್ ಉಪನ್ಯಾಸ ನೀಡಿದರು. ಪ್ರಾಂಶುಪಾಲ ಪ್ರೊ. ಪಿ.ಪಿ. ಮಮತ ಅಧ್ಯಕ್ಷತೆ ವಹಿಸಿದ್ದರು. ಶಿವಮೊಗ್ಗ ಕೋಚಿಂಗ್ ಅಕಾಡೆಮಿಯ ನಿರ್ದೇಶಕ ರಮೇಶ್ ಹೆಗಡೆ ಉಪಸ್ಥಿತರಿದ್ದರು. ನೂರಾರು ಜನ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿ ಪ್ರಯೋಜನ ಪಡೆದರು.

# ರಾಜ್ಯಮಟ್ಟದ ಷಟಲ್ ಬ್ಯಾಡ್ಮಿಂಟನ್‌ನಲ್ಲಿ ಉತ್ತಮ ಸಾಧನೆಗೈದ ಪವನ್, ಪುನೀತ್

**ನಾವಿಕ, ಶಿವಮೊಗ್ಗ ಅ.25:-**

ನಗರದ ಶ್ರೀ ಆದಿಚುಂಚನಗಿರಿ ಶಿಕ್ಷಣ ಟ್ರಸ್ಟಿನ ಶಾಖೆಯ ಗುರುಪುರದ ಬಿಜಿಎಸ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ 8 ನೇ ತರಗತಿ ಓದುತ್ತಿರುವ ಅವಳಿ ಸಹೋದರರಾದ ಪುನೀತ್.ಎಸ್. ಮತ್ತು ಪವನ್.ಎಸ್.ಷಟಲ್ ಬ್ಯಾಡ್ಮಿಂಟನ್‌ನಲ್ಲಿ ಉತ್ತಮ ಸಾಧನೆ ಮಾಡಿರುವ ಪ್ರತಿಭೆಗಳು.



ಈ ಪ್ರತಿಭಾನ್ವಿತರು 2023 - 24 ನೇ ಸಾಲಿನಲ್ಲಿ ಶಾಲಾ ಶಿಕ್ಷಣ ಇಲಾಖೆ, ಉಪ ನಿರ್ದೇಶಕರ ಕಚೇರಿ, ರಾಮನಗರ ಜಿಲ್ಲೆ, ಕನಕಪುರದ ವಡಯರಳ್ಳಿಯ ಜೈನ್ ಸ್ಪೋರ್ಟ್ಸ್ ಶಾಲೆಯ ಒಳಾಂಗಣ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದ್ದ 17 ವರ್ಷ ವಯೋಮಿತಿಯೊಳಗಿನ ಪ್ರೌಢ ಶಾಲಾ ಬಾಲಕರ ಬೆಂಗಳೂರು ವಿಭಾಗ ಮಟ್ಟದ ಷಟಲ್ ಬ್ಯಾಡ್ಮಿಂಟನ್ ಭಾಗವಹಿಸಿ, ಚಾಕಚಕ್ಯತೆಯ ಆಟದ ಪ್ರದರ್ಶನ ನೀಡಿ ಸಿಂಗಲ್ಸ್ ಮತ್ತು ಡಬಲ್ಸ್‌ನಲ್ಲಿ ಪ್ರಥಮ ಸ್ಥಾನ ಪಡೆದು. ರಾಮನಗರ ಜಿಲ್ಲೆಯಲ್ಲಿ ಅಕ್ಟೋಬರ್ 19 ಮತ್ತು 20 ರಂದು ಜೈನ್ ಸ್ಪೋರ್ಟ್ಸ್ ಒಳಾಂಗಣ ಕ್ರೀಡಾಂಗಣದಲ್ಲಿ ನಡೆದ ರಾಜ್ಯಮಟ್ಟದ 17 ವರ್ಷ ವಯೋಮಿತಿಯೊಳಗಿನ ಸಾರ್ವಜನಿಕ ಶಿಕ್ಷಣ ಇಲಾಖೆ ಇವರ ಆಶ್ರಯದಲ್ಲಿ ಆಯೋಜಿಸಲಾಗಿದ್ದ ಷಟಲ್ ಬ್ಯಾಡ್ಮಿಂಟನ್ ಲೀಗ್ ಮಾದರಿಯ ಪಂದ್ಯಾವಳಿಯಲ್ಲಿ ಗುರುಪುರದ ಬಿಜಿಎಸ್ ಆಂಗ್ಲ ಮಾಧ್ಯಮ ಶಾಲೆಯ ಪ್ರತಿಭಾನ್ವಿತ ಅವಳಿ ಸಹೋದರರಾದ ಪುನೀತ್ ಎಸ್. ಮತ್ತು ಪವನ್ ಎಸ್. ಲೀಗ್ ಮಾದರಿಯ ಎಲ್ಲಾ ಪಂದ್ಯಾವಳಿಗಳಲ್ಲಿ ಕಲಬುರ್ಗಿ ವಿಭಾಗ, ಬೆಳಗಾವಿ ವಿಭಾಗ, ಮೈಸೂರು ವಿಭಾಗಗಳ ಮಧ್ಯೆ ಸಿಂಗಲ್ಸ್ ಮತ್ತು ಡಬಲ್ಸ್‌ನಲ್ಲಿ ಅತ್ಯುತ್ತಮ ಆಟದ ಪ್ರದರ್ಶನ ಹಾಗೂ ಬಿರುಸಿನ ಹೊಡೆತ ಮತ್ತು ಅಷ್ಟೇ ರಕ್ಷಣಾತ್ಮಕ ಆಟದ ಪ್ರದರ್ಶನ ನೀಡಿ, ಪ್ರಥಮ ಸ್ಥಾನ ಹಾಗೂ ಅತ್ಯಾಕರ್ಷಕ ಪಾರಿತೋಷಕ ಮತ್ತು ಬಂಗಾರದ ಪದಕವನ್ನು ಸಂಸ್ಥೆಯ ಮಡಿಲಿಗೆ ತಂದು ಕೊಟ್ಟಿರುತ್ತಾರೆ.

ಈ ಪ್ರತಿಭಾನ್ವಿತ ಕ್ರೀಡಾಪಟುಗಳು ರಾಜ್ಯ ಮಟ್ಟದಲ್ಲಿ ಬಂಗಾರದ ಪದಕ ಪಡೆದು, ದೆಹಲಿಯಲ್ಲಿ ನಡೆಯುವ ರಾಷ್ಟ್ರ ಮಟ್ಟದ ಷಟಲ್ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ ಭಾಗವಹಿಸಲಿದ್ದಾರೆ. 15 ವರ್ಷ ವಯೋಮಿತಿ ಒಳಗಿನ ಕರ್ನಾಟಕ ರಾಜ್ಯ ಷಟಲ್ ಬ್ಯಾಡ್ಮಿಂಟನ್ ರ್‍ಯಾಂಕಿಂಗ್‌ನಲ್ಲಿ 1ನೇ ಸ್ಥಾನದಲ್ಲಿದ್ದು, 17 ವರ್ಷ ವಯೋಮಿತಿಯೊಳಗಿನ ಷಟಲ್ ರ್‍ಯಾಂಕಿಂಗ್‌ನಲ್ಲಿ 3ನೇ ಸ್ಥಾನದಲ್ಲಿರುವುದು ಮತ್ತೊಂದು ವಿಶೇಷ.

ಈ ಪ್ರತಿಭೆಗಳು ಶಿವಮೊಗ್ಗದ ಪುರಲೆಯ ವೆಂಕಟೇಶ ನಗರದಲ್ಲಿ ವಾಸವಿರುವ ಸುರೇಶ್ ಮತ್ತು ಶಕುಂತಲಾ ದಂಪತಿಗಳ ಪುತ್ರ ರಾಗಿರುತ್ತಾರೆ. ಇವರು ಪ್ರಸ್ತುತ ಬೆಂಗಳೂರಿನ ಸೆಲೆನೈಟ್ ಸ್ಪೋರ್ಟ್ಸ್ ಅಕಾಡೆಮಿಯಲ್ಲಿ, ವಿನೋದ್‌ಕುಮಾರ್ ಅವರ ಗರಡಿಯಲ್ಲಿ ತರಬೇತಿಯನ್ನು ಪಡೆಯುತ್ತಿದ್ದು, ಕ್ರೀಡೆಯ ಜೊತೆಗೆ ಓದಿನಲ್ಲೂ ಪ್ರತಿಭಾನ್ವಿತರಾಗಿರುತ್ತಾರೆ.

ಈ ಕ್ರೀಡಾ ಪ್ರತಿಭೆಗಳು ರಾಷ್ಟ್ರ ಮತ್ತು ಅಂತರಾಷ್ಟ್ರೀಯ ಮಟ್ಟದ ಕ್ರೀಡೆಗಳಲ್ಲಿ ಉತ್ತಮ ಸಾಧನೆ ಮಾಡಲಿ ಎಂದು ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪ್ರಧಾನ ಕಾರ್ಯದರ್ಶಿಗಳಾದ ಶ್ರೀ ಪ್ರಸನ್ನನಾಥ ಸ್ವಾಮೀಜಿಯವರು, ಸಂಸ್ಥೆಯ ಆಡಳಿತ ಮಂಡಳಿಯ ಸದಸ್ಯರು, ಸಂಸ್ಥೆಯ ಪ್ರಾಂಶುಪಾಲರು ಹಾಗೂ ಅಧ್ಯಾಪಕ ವೃಂದದವರು, ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು ಶುಭ ಹಾರೈಸಿದ್ದಾರೆ.


**ತಕ್ಷಣ ಬೇಕಾಗಿದ್ದಾರೆ**

- ಹುಡುಗರು/ಹುಡುಗಿಯರು-10
- ಅಕೌಂಟೆಂಟ್ (ಟ್ಯಾಲಿ ಅನುಭವದವರು)-2
- ಬಿಲ್ಲಿಂಗ್ -4 ಸೂಪರ್ ವೈಸರ್ -2

ಸೀರೆ ಮತ್ತು ರೆಡಿಮೇಡ್ ಕೌಂಟರ್‌ಗೆ ಚುರುಕಾದ ಸೇಲ್ಸ್- ಹೆಲ್ಪರ್ ಕೆಲಸಕ್ಕೆ ಬೇಕಾಗಿದ್ದಾರೆ.
ವಿಶೇಷ ಸಂಬಳ: 10000-15,200+ಇನ್ಸೆಂಟಿವ್

**ಹರೀಶ್ ಸಿಲ್ಕ್ ಅಂಡ್ ರೆಡಿಮೇಡ್**
ಗಾಂಧಿ ಬಜಾರ್, ಶಿವಮೊಗ್ಗ.
8884567088, 9036717200

**ಪ್ರಕಾಶ್ ಶೀಟ್ ರೂಫಿಂಗ್ ವರ್ಕ್ಸ್**
ನಮ್ಮಲ್ಲಿ ಮನೆ, ಗೋಡೌನ್ ಹಾಗೂ ಅಂಗಡಿಗಳ ಮೇಲೆ ಉತ್ತಮವಾದ ಜಿಂದಾಲ್-ಟಾಟಾಶೀಟ್ ರೂಫಿಂಗ್ ಮತ್ತು ಅಲ್ಯೂಮಿನಿಯಂ ವಿಂಡೋಸ್, ಸ್ಟೀಲ್ ಎಸ್‌ಎಸ್ ರೈಲಿಂಗ್ಸ್, ಗ್ರಿಲ್ಸ್, ಗೇಟ್‌ಗಳನ್ನು ಸಹ ಮಾಡಿಕೊಡಲಾಗುವುದು.
ಸಂಪರ್ಕಿಸಿ
9743101929

**Washing machine for sale**
SAMSUNG- 5.5 kg, Topload, good working condition, neatly maintained, is available for sale.
Contact:
6363992926
9448220909

**ಮನೆ ಲೀಸಿಗಿದೆ**
ವಿನೋಬನಗರ 2ನೇ ಹಂತ 5ನೇ ಕ್ರಾಸ್, ಸಾಯಿ ಬಾಬಾ ಮಂದಿರ ಹಿಂಭಾಗ 2 ಬೆಡ್ ರೂಂ 2 ವ್ಹೀಲರ್ ಪಾರ್ಕಿಂಗ್ ಹಾಗೂ ಎಲ್ಲಾ ಸೌಕರ್ಯವಿರುವ ಸುಸಜ್ಜಿತವಾದ 1ನೇ ಮಹಡಿಯಲ್ಲಿ ಮನೆ ಲೀಸಿಗಿದೆ.
ಸಂಪರ್ಕಿಸಿ
9148547247

**ಮನೆಗಳು ಮಾರಾಟಕ್ಕಿದೆ**
ಶಿವಮೊಗ್ಗ ನಗರದ ಪ್ರತಿಷ್ಟಿತ ಬಡಾವಣೆಯಾದ ತಿಲಕ್‌ನಗರ 3ನೇ ತಿರುವಿನಲ್ಲಿ 20X60 ಅಡಿ ವಿಸ್ತೀರ್ಣದಲ್ಲಿ ನಿರ್ಮಿಸಿರುವಂತಹ ಪೂರ್ವಾಭಿಮುಖವಾಗಿರುವ 5 ಮನೆಗಳು ಮಾರಾಟಕ್ಕಿದೆ.
ಸಂಪರ್ಕಿಸಿ:
9448394923
9611596427

**ಸುಸಜ್ಜಿತವಾದ ಗೋಡೌನ್ ಮಳಿಗೆ ಬಾಡಿಗೆಗೆ**
ಸುಸಜ್ಜಿತವಾದ ಗೋಡೌನ್ ಮಳಿಗೆ ಬಾಡಿಗೆಗೆ ಶಿವಮೊಗ್ಗಕ್ಕೆ ಸಮೀಪದ ಹೊಳೆಹೊನ್ನೂರು ರಸ್ತೆ ಜಾವಳ್ಳಿಯಲ್ಲಿ 25X55 ಅಡಿ ಅಳತೆಯ ಸುಸಜ್ಜಿತ ಗೋಡೌನ್ ಮಳಿಗೆ ಬಾಡಿಗೆಗಿದೆ.
ಸಂಪರ್ಕಿಸಿ
8050143183
9480211968

**ಸೈಟ್ ಮಾರಾಟಕ್ಕಿದೆ**
ವಿನೋಬನಗರ 2ನೇ ಹಂತ ಶುಭ ಮಂಗಳ ಸಭಾ ಭವನದ ಮುಂದಿನ ರಸ್ತೆಯಲ್ಲಿ 25X40 ಅಡಿ ವಿಸ್ತೀರ್ಣವುಳ್ಳ ಕಾರ್ನರ್ ಉತ್ತರ - ಪೂರ್ವಾಭಿಮುಖ ವಾಗಿರುವ ನಿವೇಶನ ಮಾರಾಟಕ್ಕಿದೆ.
ಸಂಪರ್ಕಿಸಿ
9148547247

**ಬೇಕಾಗಿದೆ**
ಬಿ.ಹೆಚ್. ಮೈನ್ ರೋಡಿಗೆ ಹೊಂದಿಕೊಂಡಿರುವ ಸೈಬರ್ ಶಾಪ್ ತೆರೆಯಲು ಅತೀ ಕಡಿಮೆ ಅಡ್ವಾನ್ಸ್ ಕಡಿಮೆ ಬಾಡಿಗೆ ಚಿಕ್ಕದಾಗಿ ಚೊಕ್ಕವಾಗಿರುವ ಮಳಿಗೆ ಬಾಡಿಗೆಗೆ ಬೇಕಾಗಿದೆ.
ಸಂಪರ್ಕಿಸಿ:
6362899916

**ಡ್ರಾಗನ್ ಹಣ್ಣಿನ ಸಸಿ ಮಾರಾಟಕ್ಕಿವೆ**
ಡ್ರಾಗನ್ ಹಣ್ಣಿನ ಸಸಿಗಳು ಮಾರಾಟಕ್ಕಿವೆ.
ದರ 40 ರೂ.
ಸಂಪರ್ಕಿಸಿ
7975485086

**ಮಾರಾಟಕ್ಕಿದೆ**
ಸ್ವಾಮಿ ವಿವೇಕಾನಂದ ಬಡಾವಣೆ, ಟ್ಯಾಕ್ಸ್ ಆಫೀಸ್ ಮತ್ತು ಚಂದನವನ ಪಾರ್ಕ್ ಹತ್ತಿರ, ಗೋಪಾಳದಲ್ಲಿ 30X40 ಅಳತೆಯ ಸೂಡಾ ಸೈಟ್ ಮಾರಾಟ ಕ್ಕಿದೆ. ಹತ್ತಿರದಲ್ಲಿ ಆಟದ ಮೈದಾನವಿದ್ದು, ಬ್ಯಾಂಕ್, ಮಾರ್ಕೆಟ್, ಸ್ಕೂಲ್‌ಗಳು ಇವೆ.
ಸಂಪರ್ಕಿಸಿ:
ನಾರಾಯಣ ಪಿ.
9242476821

**ಮನೆ ಬಾಡಿಗೆಗಿದೆ/ ಲೀಸ್**
ನಗರದ ಬಸವೇಶ್ವರ ನಗರ,3ನೇ ಕ್ರಾಸ್, ಸವಳಂಗ ರಸ್ತೆ ಸಮೀಪದಲ್ಲಿ 3 BHK, 1st Floor, 2nd Floor 1 BHK ಮನೆಗಳು ಬಾಡಿಗೆಗೆ ಮತ್ತು ಲೀಸ್‌ಗೆ ಇವೆ.
ಸಂಪರ್ಕಿಸಿ:
9008979196
9632423019

**ಸೈಟ್ ಮಾರಾಟಕ್ಕಿದೆ**
ಕೆ.ಆರ್.ಪುರಂ ಮುಖ್ಯ ರಸ್ತೆ, ಭರ್ಮಪ್ಪನಗರ 1ನೇ ಕ್ರಾಸ್‌ನಲ್ಲಿ 25X60 ಅಡಿ ಅಳತೆಯಲ್ಲಿ ವಿಶಾಲವಾದ ನಿವೇಶನ ಮಾರಾಟಕ್ಕಿದೆ.
ಆಸಕ್ತರು ಸಂಪರ್ಕಿಸಿ:
7483649643

**ಮನೆ ಬಾಡಿಗೆಗೆ/ ಭೋಗ್ಯಕ್ಕಿದೆ**
ವಿನೋಬನಗರ ನೂರಡಿ ರಸ್ತೆಗೆ ಹೊಂದಿಕೊಂಡಿರುವ ಇಂದಿರಾ ಗಾಂಧಿ ಬಡಾವಣೆಯಲ್ಲಿ 1ನೇ ಮಹಡಿಯಲ್ಲಿ ಉತ್ತಮ ನೀರಿನ ಸೌಲಭ್ಯವಿರುವ 2 ಬೆಡ್ ರೂಂನ ಮನೆ ಬಾಡಿಗೆಗೆ/ ಭೋಗ್ಯಕ್ಕೆ ಲಭ್ಯವಿದೆ.
ಸಂಪರ್ಕಿಸಿ:
8073864784

**ಜಾಹೀರಾತಿಗಾಗಿ**
9916117085



# ಜನಸಾಗರದ ನಡುವೆ ಶಿವಮೊಗ್ಗ ದಸರಾ ಸಂಪನ್ನ





## ಗಜಪಡೆಗೆ ಬೀಳ್ಕೊಡುಗೆ

ದಸರಾ ಮೆರವಣಿಗೆಯಲ್ಲಿ ಭಾಗವಹಿಸಿದ ಹೇಮಾವತಿ ಮತ್ತು ಸಾಗರ್ ಆನೆಯನ್ನು ಗೌರವಪೂರ್ಣವಾಗಿ ಸಕ್ರೆ ಬಯಲು ಬಿಡಾರಕ್ಕೆ ನಿನ್ನೆ ರಾತ್ರಿ ಬೀಳ್ಕೊಡಲಾಯಿತು. ವಾಸವಿ ಶಾಲಾ ಆವರಣದಲ್ಲಿ ಆನೆಯ ಮಾವುತರಿಗೆ ಮತ್ತು ಸಿಬ್ಬಂದಿಗಳಿಗೆ ಹಾಗೂ ಅರಣ್ಯ ಇಲಾಖೆಯ ಅಧಿಕಾರಿಗಳನ್ನು ಪಾಲಿಕೆ ವತಿಯಿಂದ ಗೌರವಿಸಲಾಯಿತು.

**ನಾವಿಕ,ಶಿವಮೊಗ್ಗ,ಅ.25:-**

ಲಕ್ಷಾಂತರ ಜನರ ಹರ್ಷೋದ್ಗಾರಗಳ ನಡುವೆ ತಹಶೀಲ್ದಾರ್ ಎನ್.ಜೆ. ನಾಗರಾಜ್ ಅಂಬು ಕಡಿಯುವುದರೊಂದಿಗೆ ರಾವಣ ದಹನದ ನಡುವೆ ಬಾಣ ಬಿರುಸುಗಳ ಕಣ್ಣು ಕೋರೈಸುವ ಬೆಳಕಿನ ಹೊಳಪಿನೊಂದಿಗೆ 10 ದಿನದ ದಸರಾ ಸಂಪನ್ನಗೊಂಡಿತು.

ಇಡೀ ಫ್ರೀಡಂ ಪಾರ್ಕ್ ಜನರಿಂದ ತುಂಬಿ ಹೋಗಿತ್ತು. ದೇವಾನುದೇವತೆಗಳು ಮೆರವಣಿಗೆಯಲ್ಲಿ ಫ್ರೀಡಂ ಪಾರ್ಕ್ ತಲುಪುವ ಮುನ್ನವೇ ಸಾವಿರಾರು ಜನರು ನೆರೆದಿದ್ದರು.

ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನದ ಅರ್ಚಕರಾದ ರಾಮಪ್ರಸಾದ್ ಮೊದಲಾದವರಿಂದ ಮಂತ್ರಘೋಷಗಳನ್ನು ಹೇಳಲಾಯಿತು. ಬನ್ನಿ ಕಡಿಯುವುದರಿಂದ 9 ದಿನಗಳ ದಸರಾ ಹಬ್ಬ ಸಂಪನ್ನಗೊಂಡಿದೆ. ನಂತರ 10 ತಲೆಯ ರಾವಣನನ್ನು ಸುಡಲಾಯಿತು.

ಫ್ರೀಡಂ ಪಾರ್ಕ್‌ನಲ್ಲಿ ಸಾರ್ವಜನಿಕರು ಸಂಗೀತ ಆಲಿಸುತ್ತಾ, ವಿವಿಧ ಬಗೆಯ ತಿನಿಸುಗಳನ್ನು ಸವಿಯುತ್ತಾ ಹಲವು ವಸ್ತುಗಳನ್ನು ಖರೀದಿಸುತ್ತಾ ಸಂಭ್ರಮದಲ್ಲಿ ಮಿಂದರು. ಯುವಕ-ಯುವತಿಯರು ಸೆಲ್ಫಿ ಮತ್ತು ವೀಡಿಯೋ ಮಾಡುವ ದೃಶ್ಯ ಸಾಮಾನ್ಯವಾಗಿತ್ತು. ಡ್ರೋಣ್‌ಗಳು ಫೋಟೋ ಕ್ಲಿಕ್ಕಿಸಲು ಆಕಾಶದಲ್ಲಿ ಸಂಚರಿಸಿದ್ದು, ನಕ್ಷತ್ರಗಳಂತೆ ಗೋಚರಿಸಿದವು. ಹಲವರು ಮೊಬೈಲ್ ಹಾಗೂ ಹೆಲ್ಮೆಟ್‌ಗಳನ್ನು ಕಳೆದುಕೊಂಡರು.

ಪಕ್ಷಭೇದವಿಲ್ಲದೆ ರಾಜಕಾರಣಿಗಳು ಬನ್ನಿ ಮುಡಿಯುವ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಮಾಜಿ ಡಿಸಿಎಂ ಈಶ್ವರಪ್ಪ, ಸಂಸದ ರಾಘವೇಂದ್ರ, ಪಾಲಿಕೆ ಮೇಯರ್ ಶಿವಕುಮಾರ್, ಉಪಮೇಯರ್ ಲಕ್ಷ್ಮೀ ಶಂಕರ್, ಪಾಲಿಕೆ ಸದಸ್ಯೆಯರು ಭಾಗವಹಿಸಿದ್ದರು. ಈಶ್ವರಪ್ಪ ಮತ್ತು ಸಂಸದರ ರಾಘವೇಂದ್ರ ಇಬ್ಬರೂ ಕೈಹಿಡಿದು ಜನರಿಗೆ ಶುಭಕೋರಿರುವುದು ದಸರಾ ಹಬ್ಬದ ವಿಶೇಷವಾಗಿತ್ತು.

ಬರಗಾಲ, ಗಣೇಶ ಹಬ್ಬ, ಈದ್ ಮಿಲಾದ್ ಗಲಾಟೆ, ರಾಜಕಾರಣಿಗಳ ಅಬ್ಬರ, ಮಾತಿನ ಸಂಘರ್ಷ ಹಲವು ತಲ್ಲಣಗಳ ನಡುವೆ ದಸರಾ ಹಬ್ಬಕ್ಕೆ ಸಿಹಿ ತೆರೆ ಬಿದ್ದಿತು.

# ತುಂಗಾ ಉಳಿಸಿ ಜನಜಾಗೃತಿಯಾಗಿ ರೂಪುಗೊಳ್ಳಬೇಕಿದೆ: ಪ್ರೊ. ಬಿ.ಎಂ. ಕುಮಾರಸ್ವಾಮಿ




**ನಾವಿಕ,ಶಿವಮೊಗ್ಗ,ಅ.25:-**

ನಿರ್ಮಲ ತುಂಗಾ ಅಭಿಯಾನ, ಗೋಪಾಳದ ಚಂದನವನ ಪಾರ್ಕ್ ಬಳಗ ಇವರ ಸಂಯುಕ್ತ ಆಶ್ರಯದಲ್ಲಿ ಇಂದು ತುಂಗಾ ಉಳಿಸಿ ಜಾಗೃತಿ ಕಾರ್ಯಕ್ರಮದ ಅಂಗವಾಗಿ ಛಾಯಾಚಿತ್ರ ಪ್ರದರ್ಶನ ಮತ್ತು ನದಿ ಉಳಿಸೋಣ ಕಾರ್ಯಕ್ರಮ ನಡೆಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಪರಿಸರವಾದಿ ಪ್ರೊ. ಬಿ.ಎಂ. ಕುಮಾರಸ್ವಾಮಿ, ಇಂದು ತುಂಗೆ ಸಾಕಷ್ಟು ಮಲಿನಗೊಂಡಿದ್ದಾಳೆ. ಶೃಂಗೇರಿಯಿಂದ ಹಿಡಿದು ಶಿವಮೊಗ್ಗದವರೆಗೂ ಕೊಳಚೆಯನ್ನು ತುಂಬಿಕೊಂಡೇ ಹರಿಯುತ್ತಿದ್ದಾಳೆ. 'ತುಂಗಾಪಾನ ಗಂಗಾ ಸ್ನಾನ' ಎಂಬ ಮಾತು ಈಗ ಸುಳ್ಳಾಗಿದೆ. ಕುಡಿಯಲು ಇರಲಿ, ಬಳಸಲು ಕೂಡ ತುಂಗಾ ನೀರು ಯೋಗ್ಯವಾಗಿಲ್ಲ ಎಂದರು.

ಶುದ್ಧೀಕರಣ ಘಟಕಗಳನ್ನು ಜಿಲ್ಲಾಡಳಿತವಾಗಲಿ, ಮಹಾನಗರ ಪಾಲಿಕೆಯಾಗಲಿ ಮಾಡಿಲ್ಲ. ನದಿಗೆ ಸಾರ್ವಜನಿಕರು ತಮ್ಮ ದಿಂಬು ಹಾಸಿಗೆಯಿಂದ ಹಿಡಿದು ಹೋಟೆಲ್‌ಗಳವರು ಮಾಂಸ, ದನಕರುಗಳ ಶವಗಳನ್ನು ಕೂಡ ಎಸೆಯುತ್ತಿದ್ದಾರೆ. ಜಲಚರ ಪ್ರಾಣಿಗಳೆಲ್ಲ ಸತ್ತು ಹೋಗಿವೆ. ಈ ಜಲಜಾಗೃತಿ ಜನಜಾಗೃತಿಯಾಗಬೇಕಾಗಿದೆ. ಈ ಹಿನ್ನೆಲೆಯಲ್ಲಿ ನಿರ್ಮಲ ತುಂಗಾ ಅಭಿಯಾನ ಕಳೆದ ಒಂದು ವರ್ಷದಿಂದ ತುಂಗಾ ನದಿ ಉಳಿವಿಗಾಗಿ ಹೋರಾಡುತ್ತಾ ಬಂದಿದೆ ಎಂದರು.

ನಿವೃತ್ತ ಇಂಜಿನಿಯರ್ ಎ. ಹಾಲೇಶಪ್ಪ ಮಾತನಾಡಿ, ನದಿಯ ನೀರು ಸ್ವಚ್ಛವಾಗಿಡಲು ಸಾರ್ವಜನಿಕರ ಪಾತ್ರವೂ ಇದೆ. ತಮ್ಮ ತಮ್ಮ ಮನೆಗಳಲ್ಲಿ ಕಸಗಳನ್ನು ಸರಿಯಾಗಿ ವಿಂಗಡಣೆ ಮಾಡಿದರೆ ಸಾಕು. ಜೊತೆಗೆ ನೀರನ್ನು ಮಿತವಾಗಿ ಬಳಸಬೇಕು. ಎಲ್ಲರೂ ಸ್ವಚ್ಛತೆಗೆ ಆದ್ಯತೆ ಕೊಟ್ಟರೆ ಜೊತೆಗೆ ಸಂಬಂಧಪಟ್ಟ ಇಲಾಖೆಗಳು ನಗರದ ಎಲ್ಲಾ ಕೊಳಚೆ ನೀರನ್ನು ಸರಿಯಾದ ರೀತಿಯಲ್ಲಿ ಶುದ್ಧೀಕರಣ ಮಾಡಿ ನದಿಗೆ ಬಿಟ್ಟರೆ ಸಮಸ್ಯೆ ಸ್ವಲ್ಪ ಮಟ್ಟಿಗಾದರೂ ಬಗೆಹರಿಯುತ್ತದೆ ಎಂದರು.

ಈ ಸಂದರ್ಭದಲ್ಲಿ ನಿರ್ಮಲ ತುಂಗಾ ಅಭಿಯಾನದ ಪ್ರಮುಖರಾದ ತ್ಯಾಗರಾಜ್ ಮಿತ್ಯಾಂತ, ಬಾಲಕೃಷ್ಣ ನಾಯ್ಡು, ಡಾ. ಶ್ರೀಧರ್, ಜಗನ್ನಾಥ್, ರಾಜೇಶ್ ಹಾಗೂ ಚಂದನವನ ಪಾರ್ಕಿನ ಪ್ರಮುಖರಾದ ಜಯಣ್ಣ, ಜಿ.ನಾಗಪ್ಪ, ದೇವರಾಜ್, ನಾಗರಾಜ್ ಸೇರಿದಂತೆ ಹಲವರಿದ್ದರು.

### ಅನಾರೋಗ್ಯಕ್ಕೂ ಕಾರಣ

ಡಾ. ಶ್ರೀಪತಿ ಮಾತನಾಡಿ, ಸಾರ್ವಜನಿಕರು ಎಲ್ಲೋ ಎಸೆದ ಒಂದು ಪ್ಲಾಸ್ಟಿಕ್ ವಸ್ತು ಸಹ ರಾಜಕಾಲುವೆಗಳ ಮೂಲಕ ತುಂಗಾ ನದಿ ಸೇರುತ್ತದೆ. ಜೊತೆಗೆ ನದಿಯ ಆಸುಪಾಸಿನ ಗದ್ದೆ-ತೋಟಗಳಲ್ಲಿ ಬಳಸುವ ರಾಸಾಯನಿಕ ಗೊಬ್ಬರ ಹಾಗೂ ಕೀಟನಾಶಕಗಳು ಕೂಡ ನದಿಗೆ ಸೇರುತ್ತಿವೆ. ಶುದ್ಧ ಕುಡಿಯುವ ನೀರಿನ ಸಮಸ್ಯೆ ಸಾಕಷ್ಟಿದೆ. ಜನರು ಅನಾರೋಗ್ಯದಿಂದ ಬಳಲುತ್ತಿದ್ದಾರೆ. ನಾವು ನಿರ್ಮಲ ತುಂಗಾ ಅಭಿಯಾನದ ಮೂಲಕ ಗಾಜನೂರಿನಿಂದ ಹೊನ್ನಾಳಿಯವರೆಗೆ ಜನಜಾಗೃತಿ ಕಾರ್ಯಕ್ರಮ ಹಮ್ಮಿಕೊಂಡಿದ್ದೇವೆ. ಜೊತೆಗೆ ನಗರದ ಸಾರ್ವಜನಿಕ ಸ್ಥಳಗಳಲ್ಲಿ ಈ ಜಾಗೃತಿ ಕ್ರಮ ನಿರಂತರವಾಗಿ ನಡೆಯುತ್ತಿದೆ ಎಂದರು.

# ಅ.28-29ರಂದು ವಿವಿಧ ಹುದ್ದೆಗಳ ನೇಮಕಾತಿಗೆ ಸ್ಪರ್ಧಾತ್ಮಕ ಪರೀಕ್ಷೆ - ಜಿಲ್ಲಾಡಳಿತ ಸಜ್ಜು

## ಜಿಲ್ಲಾಧಿಕಾರಿ ಡಾ|| ಆರ್.ಸೆಲ್ವಮಣಿ ಮಾಹಿತಿ

**ನಾವಿಕ, ಶಿವಮೊಗ್ಗ, ಅ.25:-**

ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ರಾಜ್ಯ ವಿದ್ಯುನ್ಮಾನ ಅಭಿವೃದ್ಧಿ ನಿಗಮ, ಆಹಾರ ಮತ್ತು ನಾಗರೀಕ ಸರಬರಾಜು ನಿಗಮ, ಕರ್ನಾಟಕ ಕಟ್ಟಡ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ, ಮೈಸೂರು ಸೇಲ್ಸ್ ಇಂಟರ್‌ನ್ಯಾಷನಲ್ ಹಾಗೂ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯಲ್ಲಿ ಖಾಲಿ ಇರುವ ವಿವಿಧ ಅಧಿಕಾರಿ-ಸಿಬ್ಬಂಧಿ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಅ. 28 ಮತ್ತು 29ರಂದು ರಾಜ್ಯದಾದ್ಯಂತ ಪರೀಕ್ಷೆಗಳನ್ನು ನಡೆಸಿ, ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಿಕೊಳ್ಳಲಿದೆ.

ಶಿವಮೊಗ್ಗ ಜಿಲ್ಲೆಯ 3 ತಾಲೂಕುಗಳ ಒಟ್ಟು 35ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿರುವ ಪರೀಕ್ಷೆಯು ಯಾವುದೇ ಅಡ್ಡಿ ಆತಂಕಗಳಿಲ್ಲದೆ ಹಾಗೂ ಪಾರದರ್ಶಕವಾಗಿ ನಡೆಯುವಂತೆ ನೋಡಿಕೊಳ್ಳಲು ಜಿಲ್ಲಾಡಳಿತ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿದೆ ಎಂದು ಜಿಲ್ಲಾಧಿಕಾರಿ ಡಾ|| ಆರ್.ಸೆಲ್ವಮಣಿ ಹೇಳಿದರು.

ಅವರು ಇಂದು ಜಿಲ್ಲಾಧಿಕಾರಿಗಳ ಹಳೇ ಕಚೇರಿ ಕಟ್ಟಡದಲ್ಲಿ ಪರೀಕ್ಷೆಗೆ ನಿಯೋಜಿತರಾಗಿದ್ದ ಅಧಿಕಾರಿ-ಸಿಬ್ಬಂದಿಗಳು ಹಾಗೂ ಮೇಲ್ವಿಚಾರಕರಿಗಾಗಿ ಏರ್ಪಡಿಸಲಾಗಿದ್ದ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದರು. ಅ.28ರಂದು ನಗರದ 20 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯುತ್ತಿದ್ದು, ಬೆಳಿಗ್ಗೆ10.30ರಿಂದ ನಡೆಯುವ ಅಧಿವೇಶನದಲ್ಲಿ 6945 ಪರೀಕ್ಷಾರ್ಥಿಗಳು ಹಾಗೂ ಮಧ್ಯಾಹ್ನ 2.30ರಿಂದ ನಡೆಯುವ 2ನೇ ಅಧಿವೇಶನದಲ್ಲಿ 7,000 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಅ.29ರಂದು ಶಿವಮೊಗ್ಗದ 24, ಭದ್ರಾವತಿ-6, ಸಾಗರ-2 ಮತ್ತು ಶಿಕಾರಿಪುರ-3 ಪರೀಕ್ಷಾ ಕೇಂದ್ರ ಗಳಲ್ಲಿ ಪರೀಕ್ಷೆ ಬರೆಯುತ್ತಿದ್ದು, ಅಂದು ಮೊದಲ ಅಧಿವೇಶನ ದಲ್ಲಿ 12,616 ಪರೀಕ್ಷಾರ್ಥಿಗಳು ಹಾಗೂ ಮಧ್ಯಾಹ್ನದ 2ನೇ ಅಧಿವೇಶನ ದಲ್ಲಿ 12,534 ಅಭ್ಯರ್ಥಿಗಳು ಪರೀಕ್ಷೆಗೆ ಹಾಜರಾಗಲಿದ್ದಾರೆ ಎಂದರು.



ನಡೆಯುವ ಪರೀಕ್ಷೆಗಳು ಸುಗಮವಾಗಿ ನಡೆಯುವಂತೆ ನೋಡಿಕೊಳ್ಳಲು ಪೊಲೀಸ್ ಇಲಾಖೆಯ ಸಹಯೋಗ ಪಡೆದುಕೊಳ್ಳ ಲಾಗುವುದು. ಪ್ರತಿ ಕೇಂದ್ರಕ್ಕೆ ವೀಕ್ಷಕರಾಗಿ ಎ ಶ್ರೇಣಿಯ ಅಧಿಕಾರಿಯನ್ನು, ಪ್ರಶ್ನೆ ಪತ್ರಿಕಾ ಪಾಲಕರನ್ನಾಗಿ ಓರ್ವ ಪ್ರಾಂಶುಪಾಲರನ್ನು ಹಾಗೂ ಓರ್ವ ಉಪನ್ಯಾಸಕರನ್ನು ಜಾಗೃತದಳದ ಸದಸ್ಯರನ್ನಾಗಿ ನೇಮಿಸಲಾಗಿದೆ. ಅಲ್ಲದೇ ಎಲ್ಲಾ ಪರೀಕ್ಷಾ ಕೇಂದ್ರಗಳ ಸೂಕ್ತ ನಿರ್ವಹಣೆಗಾಗಿ 10 ತ್ರಿಸದಸ್ಯ ಸಮಿತಿಗಳನ್ನು ರಚಿಸಿ ಹೊಣೆಗಾರಿಕೆ ನೀಡಲಾಗಿದೆ. ಪರೀಕ್ಷೆ ನಡೆಯುವ ದಿನದಂದು ವಿದ್ಯುತ್ ಅಡಚಣೆಯಾಗದಂತೆ ಗಮನಿಸಲಾಗುವುದು ಅಲ್ಲದೇ ಪರೀಕ್ಷಾ ಕೇಂದ್ರಗಳ ಸುತ್ತಮುತ್ತಲಿನ 200ಮೀ. ಪ್ರದೇಶದ ವ್ಯಾಪ್ತಿಯಲ್ಲಿ ಸೆ.144ಜಾರಿಗೊಳಿಸಿ ಆದೇಶ ಹೊರಡಿಸಲಾಗಿದೆ ಎಂದರು.

ಪರೀಕ್ಷಾರ್ಥಿಗಳು ಪರೀಕ್ಷಾ ಕೇಂದ್ರಕ್ಕೆ ನಿಗಧಿಪಡಿಸಿದ ಅವಧಿಗೂ ಒಂದು ಗಂಟೆಗಳ ಮುನ್ನ ಪರೀಕ್ಷಾ ಕೇಂದ್ರದಲ್ಲಿದ್ದು, ನಿಯಮಾನುಸಾರ ಪ್ರವೇಶ ಪಡೆಯಬೇಕು. ಹಿಜಾಬ್ ಧರಿಸಿದ ಪರೀಕ್ಷಾರ್ಥಿ ಗಳು ಸಕಾಲದಲ್ಲಿ ಹಾಜರಿದ್ದು, ತಪಾಸಣೆಗೆ ಒಳಗಾಗಬೇಕು. ಅದಕ್ಕಾಗಿ ಪ್ರತ್ಯೇಕ ಮಹಿಳಾ ಸಿಬ್ಬಂಧಿಗಳನ್ನು ನಿಯೋಜಿಸಲಾಗುವುದು. ನಿಗಧಿತ ಅವಧಿಯ ನಂತರ ಆಗಮಿಸುವ ಪರೀಕ್ಷಾರ್ಥಿಗಳಿಗೆ ಕೇಂದ್ರದ ಪ್ರವೇಶ ನಿರ್ಬಂಧಿಸಲಾಗಿದೆ. ಪರೀಕ್ಷೆಗೆ ಆಗಮಿಸುವ ಪ್ರತಿ ವಿದ್ಯಾರ್ಥಿಗಳು ಸ್ಮಾರ್ಟ್ ವಾಚ್, ಮೊಬೈಲ್, ಕ್ಯಾಲ್ಕುಲೇಟರ್ ಸೇರಿದಂತೆ ಯಾವುದೇ ರೀತಿಯ ಎಲೆಕ್ಟ್ರಾನಿಕ್ಸ್ ಉಪಕರಣಗಳು ಕೇಂದ್ರದೊಳಕ್ಕೆ ತರುವುದನ್ನು, ಪೂರ್ಣ ತೋಳಿನ ಷರ್ಟ್ ಧರಿಸುವುದನ್ನು, ಶೂ ಹಾಗೂ ಆಭರಣಗಳು ಧರಿಸುವುದನ್ನು ಕಡ್ಡಾಯವಾಗಿ ನಿಷೇದಿಸಲಾಗಿದೆ. ಪರೀಕ್ಷಾರ್ಥಿಗಳು ಪರೀಕ್ಷಾ ಪ್ರಾಧಿಕಾರದ ಈ ಎಲ್ಲಾ ನಿಯಮಗಳನ್ನು ಕಡ್ಡಾಯವಾಗಿ ಅನುಸರಿಸಬೇಕು. ತಪ್ಪಿದಲ್ಲಿ ಕಠಿಣ ಕಾನೂನು ಕ್ರಮಕ್ಕೆ ಶಿಫಾರಸ್ಸು ಮಾಡಲಾಗುವುದು. ಪರೀಕ್ಷೆಗಳು ನಡೆಯುವ ಅವಧಿಯಲ್ಲಿ ಪರೀಕ್ಷಾರ್ಥಿಗಳಲ್ಲದೆ ಇತರೆ ವ್ಯಕ್ತಿಗಳು ಪ್ರವೇಶಿಸುವುದನ್ನು, ಗುಂಪುಗೂಡುವುದನ್ನು ನಿಷೇಧಿಸಲಾಗಿದೆ ಎಂದವರು ತಿಳಿಸಿದ್ದಾರೆ.

ಪರೀಕ್ಷಾರ್ಥಿಗಳಿಗೆ ಅನುಕೂಲವಾಗುವಂತೆ ಕೇಂದ್ರದ ಮೇಲ್ವಿಚಾರಕರು, ವಿದ್ಯುತ್, ಶುದ್ಧಗಾಳಿ-ಬೆಳಕು, ಕುಡಿಯುವ ನೀರು, ಶೌಚಾಲಯ, ಪ್ರತಿ ಕೊಠಡಿಗೆ ಗೋಡೆಗಡಿಯಾರ ಸೌಲಭ್ಯ ಹಾಗೂ ಕಣ್ಗಾವಲಿಗಾಗಿ ಕ್ಯಾಮರಾಗಳನ್ನು ಅಳವಡಿಸಲು ಸೂಚಿಸಲಾಗಿದೆ ಎಂದು ತಿಳಿಸಿರುವ ಅವರು, ಪರೀಕ್ಷಾ ಕಾರ್ಯಕ್ಕೆ ನಿಯೋಜಿತ ಅಧಿಕಾರಿಗಳು ಯಾವುದೇ ನಿರ್ಲಕ್ಷ್ಯ ತೋರದೇ ತಮ್ಮ ಜವಾಬ್ದಾರಿಯರಿತು ಕಾರ್ಯನಿರ್ವಹಿಸುವಂತೆ ಅವರು ಸೂಚಿಸಿದ್ದಾರೆ.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಸಿದ್ಧಲಿಂಗ ರೆಡ್ಡಿ, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಕೃಷ್ಣಪ್ಪ, ಜಿಲ್ಲಾ ಖಜಾನಾಧಿಕಾರಿ ಹೆಚ್.ಎಸ್.ಸಾವಿತ್ರಿ ಸೇರಿದಂತೆ ಎಲ್ಲಾ ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರು, ನಿಯೋಜಿತ ಅಧಿಕಾರಿ-ಸಿಬ್ಬಂದಿಗಳು ಉಪಸ್ಥಿತರಿದ್ದರು.



## ಮಹಿಳಾ ಪೊಲೀಸರ ದಸರಾ ಸಡಗರ

**ನಾವಿಕ,ಶಿವಮೊಗ್ಗ,ಅ.25:-** ನಗರದ ಮಹಿಳಾ ಪೊಲೀಸ್ ಠಾಣೆಯಲ್ಲಿ ದಸರಾ ಹಬ್ಬವನ್ನು ಸಂಭ್ರಮದಿಂದ ಆಚರಿಸಲಾಯಿತು. ಈ ಸಂದರ್ಭದಲ್ಲಿ ಇನ್ಸ್‌ಪೆಕ್ಟರ್ ಭರತ್‌ಕುಮಾರ್, ಎಎಸ್‌ಐಗಳಾದ ರಮೇಶ್, ಜಯಂತಿ, ಸಿಬ್ಬಂದಿಗಳಾದ ಅರುಣ್, ರವಿ, ಸತೀಶ್ ಅಣ್ಣಪ್ಪ, ಅನುಷಾ, ಗೌರಿ, ಶ್ರುತಿ, ನೇತ್ರಾವತಿ ಹಾಗೂ ನಾಜೀಮಾ ಇದ್ದರು.

# ರಾಜಕೀಯದಲ್ಲಿ ಕುಮಾರಸ್ವಾಮಿ ವಿಲನ್ : ಸಿಎಂ ಸಿದ್ಧರಾಮಯ್ಯ

**ನಾವಿಕ,ಮೈಸೂರು,ಅ.25:-**

ರಾಜಕೀಯದಲ್ಲಿ ವಿಲನ್ ಇದ್ದರೆ ಅದು ಮಿಸ್ಟರ್ ಕುಮಾರಸ್ವಾಮಿ. ಸಮ್ಮಿಶ್ರ ಸರ್ಕಾರ ಬೀಳುವಾಗ ಅಮೆರಿಕದಲ್ಲಿ ಕೂತಿದ್ದರು ಇದಕ್ಕೆ ಏನೆಂದು ಕರೆಯಬೇಕು. ಇಡೀ ಒಂದು ವರ್ಷ ಎರಡು ತಿಂಗಳು ತಾಜ್ ವೆಸ್ಟ್ ಎಂಡ್‌ನಲ್ಲಿ ಕಾಲ ಕಳೆದರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಾಗ್ದಾಳಿ ನಡೆಸಿದರು.



ಮೈಸೂರಿನಲ್ಲಿ ಮಾತನಾಡಿದ ಅವರು, 'ಕಾಂಗ್ರೆಸ್-ಜೆಡಿಎಸ್ ಸಮ್ಮಿಶ್ರ ಸರ್ಕಾರ ಬೀಳುವಾಗ ಅಮೆರಿಕದಲ್ಲಿ ಕೂತಿದ್ದರು. ಇದಕ್ಕೆ ಏನನ್ನಬೇಕು' ಒಂದು ವರ್ಷ ಎರಡು ತಿಂಗಳು ತಾಜ್ ವೆಸ್ಟ್ ಎಂಡ್ ಹೋಟೆಲ್‌ನಲ್ಲೇ ಕಾಲ ಕಳೆದರು, ವಿಧಾನಸಭೆಯಲ್ಲಿ ಬಿಜೆಪಿ ಅವರೇ ಸರಕಾರ ಬೀಳಿಸಿದರು ಎಂದು ಹೇಳಿದರು. ಇದು ರೆಕಾರ್ಡ್ ಆಗಿದೆ. ಅಸೆಂಬ್ಲಿ ರೆಕಾರ್ಡ್ ಬೇಕಾದರೆ ಬಿಡುಗಡೆ ಮಾಡುತ್ತೇನೆ ಎಂದಿದ್ದಾರೆ.

ಬಿಜೆಪಿಯವರು ಹತಾಶರಾಗಿದ್ದಾರೆ. ಆ ಪಕ್ಷದವರಿಗಿಂತಲೂ ಕುಮಾರಸ್ವಾಮಿ ಜಾಸ್ತಿ ಹತಾಶರಾಗಿದ್ದಾರೆ ಎಂದು ವ್ಯಂಗ್ಯವಾಡಿದರು. ಬಿಜೆಪಿ -ಜೆಡಿಎಸ್‌ನದ್ದು ಕುರುಡರ ಕಥೆಯಾಗಿದೆ. ಇವರು ಅವರ ಮೇಲೆ, ಅವರು ಇವರ ಮೇಲೆ ಅವಲಂಭಿತರಾಗಿದ್ದಾರೆ. ಖಾಲಿ ಡಬ್ಬ ಮಾತ್ರ ಶಬ್ದ ಜಾಸ್ತಿ ಮಾಡುತ್ತದೆ. ತುಂಬಿದ ಕೊಡ ಎಂದಿಗೂ ತುಳುಕುವುದಿಲ್ಲ ಎಂದು ಬಿಜೆಪಿ-ಜೆಡಿಎಸ್ ನಾಯಕರ ವಿರುದ್ಧ ಹರಿಹಾಯ್ದರು.

ಕನಕಪುರ ವಿಚಾರದಲ್ಲಿ ಮಾತನಾಡಿದ ಅವರು, ಆ ವಿಷಯವನ್ನು ಡಿ.ಕೆ. ಶಿವಕುಮಾರ್ ಅವರನ್ನೇ ಕೇಳಿ. ನನಗೆ ಅದು ಗೊತ್ತಿಲ್ಲ. ನನ್ನ ಜೊತೆ ಅವರು ಚರ್ಚೆ ಮಾಡಿಲ್ಲ. ನನಗೆ ಅವರ ಮೈಂಡ್‌ನಲ್ಲಿ ಏನೂ ಇದೆ ಎಂಬುದು ಗೊತ್ತಿಲ್ಲ. ಗೊತ್ತಿಲ್ಲದ ವಿಚಾರದ ಬಗ್ಗೆ ಹೆಚ್ಚಾಗಿ ಮಾತಾಡುವುದಿಲ್ಲ ಎಂದರು.

ಈ ನಡುವೆ ಎಟಿಎಂ ಸರಕಾರ ಎಂಬ ಬಿಜೆಪಿ ಟ್ವೀಟ್‌ಗೆ ತಿರುಗೇಟು ನೀಡಿದ ಅವರು, ಬಿಜೆಪಿಗೆ ಮಾನ ಮರ್ಯಾದೆ ಇದ್ಯಾ? ಕೋಟ್ಯಂತರ ರೂಪಾಯಿ ಹಣದಲ್ಲಿ ಆಪರೇಷನ್ ಕಮಲ ಮಾಡಿದವರು ನಮ್ಮ ಬಗ್ಗೆ ಮಾತಾಡುತ್ತಾರೆ? ರಾಜ್ಯ ಆರ್ಥಿಕವಾಗಿ ದಿವಾಳಿ ಆಗಲು ಬಿಜೆಪಿ ಕಾರಣ. ವಿದ್ಯುತ್ ತೊಂದರೆ ಆಗಿದ್ದರೆ ಅದಕ್ಕೆ ಬಿಜೆಪಿ ಕಾರಣ. ಬಿಜೆಪಿ ಆಡಳಿತ ಅವಧಿಯಲ್ಲಿ ಒಂದು ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆ ಮಾಡಿಲ್ಲ. ಬಿಜೆಪಿಗೆ ಕಾಂಗ್ರೆಸ್ ಬಗ್ಗೆ ಮಾತಾಡಲು ನೈತಿಕತೆ ಇಲ್ಲ ಎಂದರು.

### ರಾಜ್ಯ ದಿವಾಳಿಯಾಗಿದ್ದು ಬಿಜೆಪಿಯಿಂದ

ಬಿಜೆಪಿಯವರು ಸಾಲ ಮಾಡಿ ಆರ್ಥಿಕವಾಗಿ ರಾಜ್ಯ ದಿವಾಳಿ ಮಾಡಿ ಹೋಗಿದ್ದಾರೆ. ಹಣ ಇರದಿದ್ದರೂ ಕಾಮಗಾರಿ ಟೆಂಡರ್ ಕರೆದು 30 ಸಾವಿರ ಕೋಟಿ ರೂ. ಪೆಂಡಿಂಗ್ ಬಿಲ್ ಇದೆ. ಇದಕ್ಕೆ ಯಾರು ಹೊಣೆ? ನಮ್ಮ ಐದು ವರ್ಷದ ಆಡಳಿತ ಅರ್ಥಿಕ ಪರಿಸ್ಥಿತಿ, ಬಿಜೆಪಿ ಅವಧಿಯ ಆರ್ಥಿಕ ಪರಿಸ್ಥಿತಿ ಬಗ್ಗೆ ಶ್ವೇತ ಪತ್ರ ಹೊರಡಿಸುತ್ತೇನೆ. ಹೈಕಮಾಂಡ್‌ಗೆ ದುಡ್ಡು ಕಳಿಸುತ್ತೇವೆ ಎಂಬುದು ಸುಳ್ಳು. ನಾವು ಯಾರಿಗೂ ಒಂದು ಪೈಸೆ ಕೊಟ್ಟಿಲ್ಲ.

# INDIA ಬೇಡ, ಭಾರತ ಎಂದು ಬರೆಯಿರಿ

## ಶಾಲಾ ಪುಸ್ತಕಗಳಲ್ಲಿ ಹೆಸರು ಬದಲಾವಣೆಗೆ NCERT ಸಮಿತಿ ಶಿಫಾರಸು!

**ನಾವಿಕ, ನವದೆಹಲಿ,ಅ.25:-** ಜಿ20 ಶೃಂಗಸಭೆ 2023ರ ಸಂದರ್ಭದಲ್ಲಿ ದೇಶದ ಹೆಸರನ್ನು ಬದಲಾಯಿಸುವ ಬಗ್ಗೆ ಸಾಕಷ್ಟು ಚರ್ಚೆಗಳು ನಡೆದಿತ್ತು. ಇಂಡಿಯಾ ಬದಲು 'ಭಾರತ' ಎಂದು ಬರೆಯಲಾಗುವುದು ಎಂದು ಹೇಳಲಾಗಿತ್ತು. ಜಿ20 ರಾಷ್ಟ್ರಪತಿಗಳ ಭೋಜನಕೂಟದ ಆಹ್ವಾನ ಪತ್ರದಲ್ಲೂ ಇಂಡಿಯಾ ಬದಲಿಗೆ ಭಾರತ ಎಂದು ಬರೆಯಲಾಗಿತ್ತು. ನಂತರ ಜಿ20 ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ನಾಮಫಲಕದಲ್ಲೂ 'ಭಾರತ' ಎಂದು ಬರೆಯಲಾಗಿತ್ತು. ಆ ನಂತರ ಸಂಸತ್ತಿನ ವಿಶೇಷ ಅಧಿವೇಶನ ಕರೆಯಲಾಯಿತು ಮತ್ತು ನಂತರ ಚರ್ಚೆ ವೇಗ ಪಡೆಯಿತು. ಆದರೆ, ಅಂತಹದ್ದೇನೂ ಆಗಲಿಲ್ಲ.

ಈಗ ಶಾಲಾ ಪುಸ್ತಕಗಳಲ್ಲಿ ದೇಶದ ಹೆಸರನ್ನು ಬದಲಾಯಿಸಲು ಶಿಫಾರಸು ಮಾಡಲಾಗಿದೆ. ರಾಷ್ಟ್ರೀಯ ಶೈಕ್ಷಣಿಕ ಸಂಶೋಧನೆ ಮತ್ತು ತರಬೇತಿ ಮಂಡಳಿಯ (ಎನ್‌ಸಿಇಆರ್‌ಟಿ) ಉನ್ನತ ಮಟ್ಟದ ಸಮಿತಿಯು ಇದನ್ನು ಶಿಫಾರಸು ಮಾಡಿದೆ. ಸಮಿತಿಯ ಅಧ್ಯಕ್ಷ ಸಿಐ ಐಸಾಕ್ ಮಾಧ್ಯಮವೊಂದಕ್ಕೆ ಪ್ರತಿಕ್ರಿಯಿಸಿದ್ದು ಇಂಡಿಯಾ ಎಂಬ ಹೆಸರನ್ನು ಶಾಲಾ ಪಠ್ಯಕ್ರಮದಿಂದ 'ಭಾರತ' ಎಂದು ಬರೆಯಬೇಕು ಎಂದು ಹೇಳಿದ್ದಾರೆ. ಪಠ್ಯಕ್ರಮದಿಂದ ಪ್ರಾಚೀನ ಇತಿಹಾಸವನ್ನು ತೆಗೆದುಹಾಕಿ ಅದರ ಬದಲಿಗೆ 'ಶಾಸ್ತ್ರೀಯ ಇತಿಹಾಸ'ವನ್ನು ಕಲಿಸುವುದು ಮತ್ತೊಂದು ಶಿಫಾರಸು ಮಾಡಿದ್ದಾರೆ.

**ಬ್ರಿಟಿಷರು ಕೊಟ್ಟ ಹೆಸರು ಇಂಡಿಯಾ, ಭಾರತ ದೇಶದ ಪ್ರಾಚೀನ ಹೆಸರು**

ಏಳು ಸದಸ್ಯರ ಸಮಿತಿಯು ಸರ್ವಾನುಮತದಿಂದ ಈ ಶಿಫಾರಸು ಮಾಡಿದೆ ಎಂದು ಐಸಾಕ್ ಹೇಳಿದರು. ಭಾರತವು ಹಳೆಯ ಹೆಸರು ಎಂದು ಅವರು ಹೇಳಿದರು. 7,000 ವರ್ಷಗಳಷ್ಟು ಹಳೆಯದಾದ ವಿಷ್ಣು ಪುರಾಣದಂತಹ ಪ್ರಾಚೀನ ಗ್ರಂಥಗಳಲ್ಲಿ ಭಾರತ ಎಂಬ ಹೆಸರನ್ನು ಬಳಸಲಾಗಿದೆ. ಐಸಾಕ್, 'ಈಸ್ಟ್ ಇಂಡಿಯಾ ಕಂಪನಿಯ ಸ್ಥಾಪನೆ, 1757ರಲ್ಲಿ ಪ್ಲಾಸಿ ಕದನದ ನಂತರವೇ ಇಂಡಿಯಾ ಎಂಬ ಪದವು ಸಾಮಾನ್ಯ ಬಳಕೆಗೆ ಬಂದಿತು. ಆದ್ದರಿಂದ ಎಲ್ಲ ವರ್ಗದ ಪುಸ್ತಕಗಳಲ್ಲಿ ಇಂಡಿಯಾ ಬದಲಿಗೆ ಭಾರತ ಎಂಬ ಹೆಸರನ್ನು ಬಳಸಬೇಕು ಎಂದು ಸಮಿತಿ ಒಮ್ಮತದಿಂದ ಸೂಚಿಸಿದೆ.



## ದಸರಾ ಶುಭಾಶಯ

**ನಾವಿಕ,ಶಿವಮೊಗ್ಗ,ಅ.25:-** ಶಾಸಕಿ ಹಾಗೂ ಜೆಡಿಎಸ್ ಶಾಸಕಾಂಗ ಪಕ್ಷದ ಉಪ ನಾಯಕಿ ಶಾರದಾ ಪೂರ್ಯಾನಾಯ್ಕರಿಗೆ ಜನಪರ ಗ್ರಾಮೀಣಾಭಿವೃದ್ಧಿ ಮತ್ತು ಸಾಮಾಜಿಕ ಸೇವಾ ಸಂಸ್ಥೆಯ ಅಧ್ಯಕ್ಷೆ ಯಶೋಧ ಶಮೀಪತ್ರೆ ಕೊಟ್ಟು ದಸರಾ ಶುಭಾಶಯ ಹೇಳಿದರು.

# ಹುಲಿ ಉಗುರು ಪೆಂಡೆಂಟ್ ಕೃತಕವಾದದ್ದು: ನಿಖಿಲ್ ಕುಮಾರಸ್ವಾಮಿ ಸ್ಪಷ್ಟನೆ

**ನಾವಿಕ, ಬೆಂಗಳೂರು, ಅ.25:-**

ಹುಲಿ ಉಗುರು ಪೆಂಡೆಂಟ್ ಧರಿಸಿದ ಆರೋಪವನ್ನು ಸ್ಪಷ್ಟವಾಗಿ ತಳ್ಳಿಹಾಕಿರುವ ಜೆಡಿಎಸ್ ಯುವ ನಾಯಕ, ಮಾಜಿ ಮುಖ್ಯಮಂತ್ರಿ ಎಚ್ ಡಿ ಕುಮಾರಸ್ವಾಮಿ ಅವರ ಪುತ್ರ ನಿಖಿಲ್ ಕುಮಾರಸ್ವಾಮಿ ಅವರು, ನಾನು ಧರಿಸಿದ್ದ ಹುಲಿ ಉಗುರು ಮಾದರಿಯ ಪೆಂಡೆಂಟ್ ಕೃತಕವಾದದ್ದು ಎಂದು ಸ್ಪಷ್ಟಪಡಿಸಿದ್ದಾರೆ.



ನಾನು ಧರಿಸಿದ್ದ ಹುಲಿ ಉಗುರು ಮಾದರಿಯ ಪೆಂಡೆಂಟ್ ಕೃತಕವಾದದ್ದೇ ಹೊರತು, ನೈಜವಾದುದ್ದಲ್ಲ. ಅದನ್ನು ನನ್ನ ಮದುವೆ ಸಮಯದಲ್ಲಿ ಉಡುಗೊರೆ ನೀಡಿದ್ದು. ಅದು ಈಗಲೂ ನನ್ನ ಬಳಿ ಇದೆ. ಸಂಬಂಧಪಟ್ಟ ಅಧಿಕಾರಿಗಳು ಪರಿಶೀಲಿಸಬಹುದು. ದಯ ಮಾಡಿ ಯಾರೂ ಸತ್ಯಕ್ಕೆ ದೂರವಾದ ಸುದ್ದಿಗಳನ್ನು ಪ್ರಸಾರ ಮಾಡಬಾರದು ಎಂದು ನಿಖಿಲ್ ಕುಮಾರಸ್ವಾಮಿ ಅವರು ಟ್ವೀಟ್ ಮೂಲಕ ವಿನಂತಿ ಮಾಡಿದ್ದಾರೆ.

ತಮ್ಮ ಮದುವೆ ಸಮಯದಲ್ಲಿ ನಿಖಿಲ್ ಕುಮಾರಸ್ವಾಮಿ ಅವರು ಹುಲಿ ಉಗುರಿನ ಪೆಂಡೆಂಟ್ ಧರಿಸಿದ್ದರು ಎಂದು ಕೆಲ ಮಾಧ್ಯಮಗಳಲ್ಲಿ ವರದಿ ಮಾಡಲಾಗಿದೆ. ಇದು ಸತ್ಯಕ್ಕೆ ದೂರ. ವನ್ಯಜೀವಿ ಸಂರಕ್ಷಣಾ ಕಾಯ್ದೆ ಮತ್ತು ಅದರ ಗಂಭೀರತೆ ಬಗ್ಗೆ ನನಗೆ ಖಂಡಿತಾ ಅರಿವಿದೆ ಎಂದು ಟ್ವೀಟ್ ಮಾಡಿದ್ದಾರೆ.

Edited, Printed, Published and Owned by Smt. Latha Rangaswamy. Printed at Navika Offset Printers, Near Manjunatha Talkies, MKK Road, Shimoga- 577 202. Published at Navika Offset Printers, Near Manjunatha Talkies, MKK Road, Shimoga - 577 202. Phone : 08182 - 404747, 221557